ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ


ಮಾಸ ಪತ್ರಿಕೆ

ಸಂಪುಟ : 5 । ಸಂಚಿಕೆ : 12 । ಡಿಸೆಂಬರ್ - 2023 । ಪುಟಗಳು : 20 । ಬೆಲೆ : 25/-

## ಕಲಘಟಗಿಯಲ್ಲಿ ಸಹಕಾರ ಸಪ್ತಾಹ ಆಚರಣೆ



### ಆಯ್ಕೆ



ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾಗಿ **ಶ್ರೀ ವಿ.ರಾಜು** ಅವಿರೋಧವಾಗಿ ಆಯ್ಕೆಯಾಗಿದ್ದಾರೆ

### ಸಹಕಾರ ರತ್ನ ಪುರಸ್ಕೃತರು



ಶ್ರೀ ಧರೇಪ್ಪ ಎಂ. ಅಲಗೂರ



ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ



ಶ್ರೀ ಡಿ.ಆರ್.ನಾಗೇಶಪ್ಪ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಧರೇಪ್ಪ ಎಂ. ಅಲಗೂರ, ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ ಹಾಗೂ ಶ್ರೀ ಡಿ. ಆರ್. ನಾಗೇಶಪ್ಪ ರವರುಗಳು 2023ನೇ ಸಾಲಿನ "ಸಹಕಾರ ರತ್ನ" ಪ್ರಶಸ್ತಿಗೆ ಬಾಜನರಾಗಿದ್ದಾರೆ

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿಕಟಪೂರ್ವ ಅಧ್ಯಕ್ಷರಾದ ಶ್ರೀಮತಿ ಕೆ. ಲಲಿತಾ ಜಿ.ಟಿ. ದೇವೇಗೌಡರಿಗೆ ಗೌರವ ಸಲ್ಲಿಕೆ



ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿಕಟಪೂರ್ವ ಅಧ್ಯಕ್ಷರಾದ ಶ್ರೀಮತಿ ಕೆ. ಲಲಿತಾ ಜಿ.ಟಿ. ದೇವೇಗೌಡ ಅವರನ್ನು ಪತ್ತಿನ ಮಹಾಮಂಡಳದ ಆಡಳಿತ ಮಂಡಳಿ ಸಭೆಯಲ್ಲಿ ಆತ್ಮೀಯವಾಗಿ ಗೌರವಿಸಿ ಅವರ ಸೇವೆಯನ್ನು ಸ್ಮರಿಸಲಾಯಿತು.



ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಧರೆಪ್ಪ ಎಂ. ಅಲಗೂರ, ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ ಹಾಗೂ ಶ್ರೀ ಡಿ.ಆರ್.ನಾಗೇಶಪ್ಪ ರವರುಗಳು 2023ನೇ ಸಾಲಿನ "ಸಹಕಾರ ರತ್ನ" ಪ್ರಶಸ್ತಿಗೆ ಬಾಜನರಾಗಿದ್ದು, ಅವರುಗಳನ್ನು ಪತ್ತಿನ ಮಹಾಮಂಡಳದ ಆಡಳಿತ ಮಂಡಳಿ ಸಭೆಯಲ್ಲಿ ಆತ್ಮೀಯವಾಗಿ ಗೌರವಿಸಿ ಅಭಿನಂದಿಸಲಾಯಿತು.

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪರವಾಗಿ ಕಲಘಟಗಿಯಲ್ಲಿ ನಡೆದ "70ನೇ ಅಖಿಲ ಭಾರತ ಸಹಕಾರ ಸಪ್ತಾಹ"ದ ಕಾರ್ಯಕ್ರಮದಲ್ಲಿ ಸಹಕಾರ ಕ್ಷೇತ್ರದಲ್ಲಿ ಸಲ್ಲಿಸಿರುವ ಸಹಕಾರಿಗಳ, ಸಂಘಗಳ ಸೇವೆಯನ್ನು ಪರಿಗಣಿಸಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.**

## "ಉತ್ತಮ ಸಹಕಾರಿ"ಗಳು

1. ಶ್ರೀ ಕೆ.ಆರ್. ಪ್ರಕಾಶ್, ನಿರ್ದೇಶಕರು, ಲೋಕಪಾವನಿ ಕ್ರೆಡಿಟ್ ಕೋ–ಆಪ್. ಸೊಸೈಟಿ ಲಿ., ಬೆಂಗಳೂರು.
2. ಶ್ರೀ ಶೇಖರ್. ವಿ, ನಿರ್ದೇಶಕರು, ಯಶವಂತಪುರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು.
3. ಶ್ರೀ ಎಂ. ಮರಿಲಿಂಗೇಗೌಡ, ಅಧ್ಯಕ್ಷರು, ರಾಮಸಂದ್ರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು.
4. ಶ್ರೀ ಬಸವರಾಜಣ್ಣ, ಅಧ್ಯಕ್ಷರು ಕಾಯಕಯೋಗಿ ಸಹಕಾರ ಸಂಘ ನಿ., ಬೆಂಗಳೂರು.
5. ಶ್ರೀ ನಾಗರಾಜು ಬಿ.ಹೆಚ್, ನಿರ್ದೇಶಕರು, ಶ್ರೀ ಭೈರವೇಶ್ವರ ಕ್ರೆಡಿಟ್ ಕೋ–ಆಪ್. ಸೊಸೈಟಿ ಲಿ., ಬೆಂಗಳೂರು.
6. ಶ್ರೀ ಮಹಾಲಿಂಗಂ, ಅಧ್ಯಕ್ಷರು, ಗುತ್ತಿಗೆದಾರರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಮೈಸೂರು.

## "ಉತ್ತಮ ಸಹಕಾರ ಸಂಘ"ಗಳು

1. ನೇತಾಜಿ ಕ್ರೆಡಿಟ್ ಕೋ–ಆಫರೇಟಿವ್ ಸೊಸೈಟಿ ಲಿ., ಬೆಂಗಳೂರು.
2. ನೇತ್ರಾವತಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು.
3. ದಿ ಕರ್ನಾಟಕ ವೃತ್ತ ಅಂಚೆ ಪತ್ತಿನ ಸಹಕಾರ ಸಂಘ ನಿಯಮಿತ., ಬೆಂಗಳೂರು.
4. ದೈವಜ್ಞ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಶಿವಮೊಗ್ಗ.
5. ಕನಕ ವಿವಿಧೊದ್ದೇಶ ಸಹಕಾರ ಸಂಘ ನಿ., ಹದಡಿ, ದಾವಣಗೆರೆ.
6. ತಾಲ್ಲೂಕು ಪದವೀಧರರ ಸಹಕಾರ ಸಂಘ ನಿ., ಶಿಕಾರಿಪುರ, ಶಿವಮೊಗ್ಗ.
7. ಮುಂಡಗೋಡ ದೈವಜ್ಞ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿ., ಮುಂಡಗೋಡ, ಉತ್ತರ ಕನ್ನಡ.
8. ಶ್ರೀ ಸಿದ್ದೇಶ್ವರ ಕೋ–ಆಪ್. ಕ್ರೆಡಿಟ್ ಸೊಸೈಟಿ ಲಿ., ಬೋರಗಾಂವ, ಬೆಳಗಾವಿ.
9. ಭಾವಸಾರ ಕ್ಷತ್ರಿಯ ಸಹಕಾರ ಪತ್ತಿನ ಸಂಘ ನಿ., ಹುಬ್ಬಳ್ಳಿ.
10. ಕಿತ್ತೂರು ಚನ್ನಮ್ಮ ಮಹಿಳಾ ಪತ್ತಿನ ಸಹಕಾರಿ ಸಂಘ ನಿ., ಬಾದಾಮಿ, ಬಾಗಲಕೋಟೆ.
11. ಶ್ರೀ ಜಡಿಸಿದ್ದೇಶ್ವರ ಕ್ರೆಡಿಟ್ ಸಹಕಾರ ಸಂಘ ನಿ., ಎಮ್ಮಿಗನೂರು, ಬಳ್ಳಾರಿ.
12. ಶ್ರೀ ರಾಜರಾಜೇಶ್ವರಿ ಪತ್ತಿನ ಸಹಕಾರ ಸಂಘ ನಿ., ಸೂಳೇಭಾವಿ, ಹುನಗುಂದ, ಬಾಗಲಕೋಟೆ.
13. ವರದವಿನಾಯಕ ಕ್ರೆಡಿಟ್ ಸಹಕಾರ ಸಂಘ ನಿ., ಬಳ್ಳಾರಿ.
14. ದಿ. ಲೋಕಾಪೂರ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸೈಟಿ ಲಿ., ಲೋಕಾಪೂರ, ಬಾಗಲಕೋಟೆ.
15. ಸ್ವರ್ಣಕುಂಭ ವಿವಿಧೋದ್ದೇಶ ಸಹಕಾರಿ ಸಂಘ ನಿ., ಸುರತ್ಕಲ್, ದಕ್ಷಿಣ ಕನ್ನಡ ಜಿಲ್ಲೆ.
16. ಪ್ರಗತಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಮೈಸೂರು.

## ಸಂಪಾದಕೀಯ



ಶ್ರೀ ವಿ. ರಾಜು
ಅಧ್ಯಕ್ಷರು

**ಸಹಕಾರ ಸಂಘಗಳಲ್ಲಿ ನೆರವು ಬಯಸುವ ಜನರನ್ನು ಸಹಕಾರ ಕಕ್ಷೆಗೆ ಸೇರ್ಪಡೆಗೊಳಿಸುವುದರ ಜೊತೆಗೆ ತಮ್ಮ ಧ್ಯೇಯೋದ್ದೇಶಗಳನ್ನು ವಿಸ್ತರಿಸಿಕೊಳ್ಳುವ ಮೂಲಕ ಪರಿಣಾಮಕಾರಿಯಾಗಿ ಸೇವೆ ಸಲ್ಲಿಸುವುದು ಸಹಕಾರ ಸಂಘಗಳ ಜವಾಬ್ದಾರಿಯುತ ಕರ್ತವ್ಯವೂ ಹೌದು.**

### 5 ಟ್ರಿಲಿಯನ್ ಡಾಲರ್ ಆರ್ಥಿಕತೆಯ ಗುರಿ:

# ಸಹಕಾರ ಸಂಸ್ಥೆಗಳ ಸೇವೆ ಪರಿಣಾಮಕಾರಿಯಾಗಲಿ

ಅಖಿಲ ಭಾರತ ಸಹಕಾರ ಸಪ್ತಾಹ ಆಚರಣೆಯನ್ನು ರಾಜ್ಯಾದ್ಯಂತ ಯಶಸ್ವಿಯಾಗಿ ಆಚರಿಸಲಾಗಿದೆ. ಭಾರತದ ಆರ್ಥಿಕತೆಯ ಸಾಧನೆಯಲ್ಲಿ 2025ರ ವರ್ಷದ ವೇಳೆಗೆ 5 ಟ್ರಿಲಿಯನ್ ಡಾಲರ್ ಗುರಿ ಸಾಧಿಸುವುದು ಮುಖ್ಯ ಧ್ಯೇಯವಾಗಿದ್ದು, ಭಾರತದ ಆರ್ಥಿಕತೆ ವ್ಯವಸ್ಥೆ ಈಗಾಗಲೇ ಅಂದಾಜು 4 ಟ್ರಿಲಿಯನ್ ಡಾಲರ್ ಆರ್ಥಿಕತೆಯ ಸಾಧನೆ ಮಾಡಿರುವುದು ಸಂತಸದ ವಿಚಾರವಾಗಿದೆ.

ಏಳು ದಿನಗಳ ಕಾಲ ನಡೆದ ಸಹಕಾರ ಸಪ್ತಾಹದ ಆಚರಣೆಯಲ್ಲಿ ಪ್ರಮುಖ ವಿಷಯಗಳ ಕುರಿತು ಚಿಂತನ–ಮಂತನ ನಡೆಸಲಾಗಿದ್ದು. ಮುಂಬರುವ ದಿನಗಳಲ್ಲಿ ಸಹಕಾರ ಸಂಸ್ಥೆಗಳು ಮತ್ತಷ್ಟು ಬೆಳವಣಿಗೆ ಹೊಂದಲು ಕಾರ್ಯಯೋಜನೆಗಳನ್ನು ರೂಪಿಸಿಕೊಂಡು ಮುನ್ನಡೆಯುವುದು ಅನಿವಾರ್ಯವೂ ಆಗಿದೆ.

ಸಹಕಾರ ಸಂಘಗಳಲ್ಲಿ ನೆರವು ಬಯಸುವ ಜನರನ್ನು ಸಹಕಾರ ಕಕ್ಷೆಗೆ ಸೇರ್ಪಡೆಗೊಳಿಸುವುದರ ಜೊತೆಗೆ ತಮ್ಮ ಧ್ಯೇಯೋದ್ದೇಶಗಳನ್ನು ವಿಸ್ತರಿಸಿಕೊಳ್ಳುವ ಮೂಲಕ ಪರಿಣಾಮಕಾರಿಯಾಗಿ ಸೇವೆ ಸಲ್ಲಿಸುವುದು ಸಹಕಾರ ಸಂಘಗಳ ಜವಾಬ್ದಾರಿಯುತ ಕರ್ತವ್ಯವೂ ಹೌದು.

ರಾಷ್ಟ್ರದ ಸಹಕಾರ ಚಳುವಳಿಯನ್ನು ಅವಲೋಕಿಸಿದಾಗ ದೇಶದಲ್ಲಿ 8.50ಲಕ್ಷ ಸಹಕಾರ ಸಂಘಗಳಲ್ಲಿ, ಅಂದಾಜು 2 ಲಕ್ಷ ವಸತಿ ಸಹಕಾರ ಸಂಘಗಳು, 2 ಲಕ್ಷ ಹಾಲು ಉತ್ಪಾದಕರ ಸಹಕಾರ ಸಂಘಗಳು, ಒಂದು ಲಕ್ಷ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿವೆ. ನಂತರದ ಸ್ಥಾನದಲ್ಲಿ ಪತ್ತಿನ ಸಹಕಾರ ಸಂಘಗಳ ಸಂಖ್ಯೆ ಕೇವಲ 65000. ಈ ಹಿನ್ನಲೆಯಲ್ಲಿ ರಾಜ್ಯದಲ್ಲಿ ಹೆಚ್ಚು ಪತ್ತಿನ ಸಂಘಗಳು ಸ್ಥಾಪನೆಯಾಗಿ ಆರೂವರೆ ಕೋಟಿ ಜನರಲ್ಲಿ ಹೆಚ್ಚು ಸದಸ್ಯರ ಸೇವೆಗೆ ಮುನ್ನುಡಿ ಬರೆಯಬೇಕಾಗಿದೆ.

ರಾಜ್ಯದ ಜನರೆಲ್ಲರೂ ಸಹಕಾರ ಸಂಘಗಳ ಸದಸ್ಯರಾಗಬೇಕು ಎಂಬ ಆಶಯದೊಂದಿಗೆ ಸಹಕಾರ ಚಳುವಳಿಯನ್ನು ಪರಿಣಾಮಕಾರಿಯಾಗಿ ಬಲಿಷ್ಠಗೊಳಿಸುವ ದೂರದೃಷ್ಟಿ ಚಿಂತನೆಗಳೊಂದಿಗೆ ಸಹಕಾರ ವ್ಯವಸ್ಥೆಯ ಪ್ರಯೋಜನ ಎಲ್ಲರಿಗೂ ಲಭ್ಯವಾಗಬೇಕು. ಸಹಕಾರ ಆಂದೋಲನದ ಮೂಲಕ ಬಡತನ ನಿವಾರಣೆ, ಉದ್ಯೋಗ ಸೃಷ್ಠಿ ಆಗಬೇಕು ಎಂಬುದು ನಮ್ಮೆಲ್ಲರ ಗುರಿಯಾಗಬೇಕಿದೆ. ಗುರಿ ಮುಟ್ಟಲು ಎಲ್ಲಾ ಸಹಕಾರಿಗಳು, ಸಹಕಾರ ಸಂಘಗಳು ಪರಸ್ಪರ ಕೈಜೋಡಿಸಬೇಕು.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀ ವಿ. ರಾಜು**

ಕಾರ್ಯನಿರ್ವಾಹಕ ಸಂಪಾದಕರು:
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್ ಗೌಡ**

ಸದಸ್ಯರು :
**ಶ್ರೀ ಕೆ. ಕೃಷ್ಣಮೂರ್ತಿ, ಶ್ರೀ ಜಿ. ಮಲ್ಲಿಕಾರ್ಜುನಯ್ಯ**
**ಶ್ರೀ ಹೆಚ್.ಟಿ. ನಾಗೇಶ್, ಶ್ರೀ ಚಿತ್ತರಂಜನ್ ಬೋಳಾರ್**

ಸಂಪಾದಕರು :
**ಪ್ರಜ್ವಲ್ ಕೆ.ಎನ್.**
ಮುಖ್ಯಕಾರ್ಯನಿರ್ವಹಣಾಧಿಕಾರಿ

## ಬೆಂಗಳೂರಿನಲ್ಲಿ ನಡೆದ ರಾಷ್ಟ್ರೀಯ ಸಹಕಾರ ನೀತಿ ಕುರಿತು ಕಾರ್ಯಾಗಾರ

# ರಾಷ್ಟ್ರೀಯ ಸಹಕಾರ ನೀತಿ ಕರಡು ಅಂತಿಮ: ಸುರೇಶ್ ಪ್ರಭು



ವರದಿಗೆ 6ನೇ ಪುಟ ನೋಡಿ.....

**ಸುಭಾಷಿತ :** ಕನ್ನಡ ನಾಡಿನಲ್ಲಿ ಕನ್ನಡಕ್ಕೆ ಪ್ರಥಮ ಸ್ಥಾನ ದೊರೆಯಲಿ ಎಂದಾಕ್ಷಣ ಬೇರೆಯವರಿಗೆ ಸ್ಥಾನವೇನಿಲ್ಲ ಎಂದಲ್ಲ. ನಮ್ಮಲ್ಲಿಗೆ ಬೇರೆಯವರು ಬರಲಿ, ಅತಿಥಿಯಾಗಿ ಬರಲಿ, ಯಜಮಾನರಾಗಿ ಅಲ್ಲ. – ಕುವೆಂಪು

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಓ.
ಐದು ವರ್ಷಗಳ ಚಂದಾ: ರೂ : 1770/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

# 70ನೇ ಅಖಿಲ ಭಾರತ ಸಹಕಾರ ಸಪ್ತಾಹ
## ಜನಜಾಗೃತಿಗೆ ಒತ್ತು; ರಾಷ್ಟ್ರದ ಆರ್ಥಿಕತೆ ಬೆಳವಣಿಗೆಗೆ ಸಹಕಾರ ವ್ಯವಸ್ಥೆ ಪೂರಕ : ಸಚಿವ ಸಂತೋಷ್ ಲಾಡ್



**ಕಲಘಟಗಿ/ಮಿಶ್ರೀಕೋಟಿ :** ರೈತರಿಗೆ ನೆರವಾಗುವ ಕೆಲಸವನ್ನು ನೇರವಾಗಿ ಸಹಕಾರಿಗಳು ಮಾಡುತ್ತಾರೆ. ಹಳ್ಳಿಯ ಜನ ಜಾಗೃತರಾಗಿ ಸಹಕಾರ ತತ್ವದ ಸದುಪಯೋಗ ಪಡೆಯಬೇಕು ಎಂದು ಕಾರ್ಮಿಕ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಮತ್ತು ಕರ್ನಾಟಕ ರಾಜ್ಯ ತೋಟಗಾರಿಕಾ ಮಹಾಮಂಡಳ ಹಾಗೂ ಕರ್ನಾಟಕ ಸೆಂಟ್ರಲ್ ಕೋ–ಆಪರೇಟಿವ್ ಬ್ಯಾಂಕ್ ಧಾರವಾಡ ಮತ್ತು ವಿವಿಧ ಸಹಕಾರ ಸಂಘಗಳು, ಹಾಲು ಒಕ್ಕೂಟ ಹಾಗೂ ಸಹಕಾರ ಇಲಾಖೆ ಆಶ್ರಯದಲ್ಲಿ ಆಯೋಜಿಸಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಸಹಕಾರ ರಂಗಕ್ಕೆ ರೈತರ ಜೊತೆ ನೇರ ಸಂಪರ್ಕವಿದೆ. ಗೊಬ್ಬರ ವಿತರಣೆ, ವಿವಿಧ ಸಾಲಗಳು, ಸಹಕಾರ ಸಂಘಗಳಿಂದ ಕೃಷಿಕರಿಗೆ ದೊರೆಯುತ್ತಿವೆ. ಕೆಎಂಎಫ್ ಹಾಗೂ ಎಲ್ಲ ಜಿಲ್ಲಾ ಡಿಸಿಸಿ ಬ್ಯಾಂಕ್‌ಗಳು ಸಹಕಾರ ಸಂಘಗಳಿಂದ ಮೂಲಕ ಗ್ರಾಮೀಣ ಜನರಿಗೆ ಹಾಗೂ ಕೃಷಿಕರಿಗೆ ಉತ್ತೇಜನ ನೀಡುತ್ತಿವೆ ಎಂದರು.

ಸಹಕಾರ ಸಂಘಕ್ಕೆ ಅವಿಭಜಿತ ಧಾರವಾಡ ಜಿಲ್ಲೆಯ ಸಹಕಾರಿ ರಂಗದ ಪಿತಾಮಹ ಸಿದ್ದನಗೌಡ ಸಣ್ಣ ರಾಮನಗೌಡ ಪಾಟೀಲರ ಕೊಡುಗೆ ಅಪಾರ. ಸಹಕಾರ ಸಂಸ್ಥೆಗಳು ಬಡತನ ನಿವಾರಿಸಲು, ಉದ್ಯೋಗ ಸೃಷ್ಟಿಸಲು ಮತ್ತು ಸಮಾನ ಆರ್ಥಿಕ ಬೆಳವಣಿಗೆ ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿವೆ. ಸಹಕಾರಿ ಸಂಘಗಳಿಂದ ಶಿಕ್ಷಣದ ಗುಣಮಟ್ಟ ಸುಧಾರಿಸಿ ಉದ್ಯೋಗ ಹೆಚ್ಚಿಸಲು ಸಾಧ್ಯವಾಗಿದೆ ಎಂದು ಹೇಳಿದರು.

ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ.ನಂಜನಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಸಾಧನೆಯಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಮತ್ತು ಸುಸ್ಥಿರ ಅಭಿವೃದ್ಧಿ ಗುರಿಗಳ ಬಗ್ಗೆ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿರ್ದೇಶಕ ಡಾ। ಸಂಜಯ ಹೊಸಮಠ ಮಾತನಾಡಿದರು. ಕೆಸಿಸಿ ಬ್ಯಾಂಕ್ ನಿರ್ದೇಶಕ ಮಂಜುನಾಥಗೌಡ ಲಾಡ್, ಮುರಳಿ ಸ್ವಾಗತಿಸಿದರು. ಶರಣಗೌಡ ಪಾಟೀಲರು ಸಹಕಾರ ಸಂದೇಶ ವಾಚಿಸಿದರು. ಕೆಸಿಸಿ ಬ್ಯಾಂಕ್ ಆಡಳಿತ ಮಂಡಳಿ ನೂತನ ಸದಸ್ಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೂ ಮೊದಲು ಸಚಿವರು ಸೇರಿದಂತೆ ಎಲ್ಲ ಅತಿಥಿಗಳು ಸಹಕಾರಿಗಳ ಜಾಥಾ ಮೂಲಕ ವೇದಿಕೆಗೆ ಆಗಮಿಸಿದರು. ನಂತರ ಗಣ್ಯರಿಂದ ಸಹಕಾರ ಧ್ವಜಾರೋಹಣ ಜರುಗಿತು. ಸಹಕಾರಿ ಪಿತಾಮಹರ ಭಾವಚಿತ್ರಕ್ಕೆ ಪುಷ್ಪಾರ್ಚನೆ, ಶ್ರೇಷ್ಠ ಸಹಕಾರಿಗಳಿಗೆ ಸನ್ಮಾನ, ಸಹಕಾರ ವಾರಪತ್ರಿಕೆ ವಿಶೇಷ ಸಂಚಿಕೆ ಮತ್ತು ಸ್ವಾಭಿಮಾನಿ ಸಹಕಾರಿ ವಿಶೇಷ ಸಂಚಿಕೆ ಬಿಡುಗಡೆಯಾದವು.

ಗ್ರಾಹಕರ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಪಿ. ಪಾಟೀಲ, ಸಹಕಾರ ಮಹಾಮಂಡಳ ಉಪಾಧ್ಯಕ್ಷರಾದ ಜಗದೀಶ ಕವಟಗಿಮಠ,






ನಿರ್ದೇಶಕರುಗಳಾದ ಬಾಪುಗೌಡ ಡಿ. ಪಾಟೀಲ, ಶೇಖರಗೌಡ ಮಾಲಿ ಪಾಟೀಲ, ರಾಜ್ಯ ತೋಟಗಾರಿಕಾ ಮಹಾಮಂಡಳ ಅಧ್ಯಕ್ಷರಾದ ಬಿ.ಡಿ. ಭೂಕಾಂತ, ಕಾಸ್ಕಾರ್ಡ್ ಬ್ಯಾಂಕ್ ಉಪಾಧ್ಯಕ್ಷ ಉಳವಪ್ಪ ದಾಸನೂರ, ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಉಪಾಧ್ಯಕ್ಷ ಎ.ಆರ್. ಪ್ರಸನ್ನಕುಮಾರ, ರಾಜ್ಯ ಸಹಕಾರ ಪತ್ತಿನ ಸಂಘಗಳ ಉಪಾಧ್ಯಕ್ಷ ಮಹೇಂದ್ರ ಪ್ರಸಾದಗೌಡ, ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಉಪಾಧ್ಯಕ್ಷ ಶಿವಕುಮಾರಗೌಡ ಪಾಟೀಲ, ಧಾರವಾಢ ಹಾಲು ಒಕ್ಕೂಟದ ಅಧ್ಯಕ್ಷ ಶಂಕರ ಮುಗದ, ಹಾವೇರಿ ಹಾಲು ಒಕ್ಕೂಟದ ಅಧ್ಯಕ್ಷ ಬಸವರಾಜ ಅರಬಗೊಂಡ, ಜಿಲ್ಲಾ ಸೌಹಾರ್ದ ಸಹಕಾರಿ ಒಕ್ಕೂಟ ಅಧ್ಯಕ್ಷ ಮಲ್ಲಿಕಾರ್ಜುನ ಹೊರಕೇರಿ, ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಲಿಂಗಣ್ಣ ಚಪ್ಪರದಳ್ಳಿ, ಡಾ। ಸಂಜಯ ಹೊಸಮಠ, ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಶಂಕರಪ್ಪ ರಾಯನಾಳ, ತಮ್ಮಣ್ಣ ಕೆಂಚರಡ್ಡಿ, ಗೀತಾ ಮರಿಲಿಂಗಣ್ಣವರ, ಸಹಕಾರ ಸಂಘಗಳ ಸಂಯುಕ್ತ ನಿಬಂಧಕ ಡಾ। ಸುರೇಶಗೌಡ, ರಾಜ್ಯ ಸಹಕಾರ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಸಹಕಾರ ಸಂಘಗಳ ಜಂಟಿ ನಿಬಂಧಕರಾದ ಕಲ್ಲಪ್ಪ ಓಬಣ್ಣಗೋಳ, ಮಹಾಮಂಡಳದ ಲೆಕ್ಕಾಧಿಕಾರಿ ಚಂದ್ರಶೇಖರ್ ಹೆಚ್. ಹೆಚ್., ಸಂಚಾಲಕರಾದ ಜೆ.ಜಿ. ಸೀನಪ್ಪ ಇನ್ನಿತರರಿದ್ದರು.

### ಬೆಂಗಳೂರಿನಲ್ಲಿ ನಡೆದ ರಾಷ್ಟ್ರೀಯ ಸಹಕಾರ ನೀತಿ ಕುರಿತು ಕಾರ್ಯಾಗಾರ

## ರಾಷ್ಟ್ರೀಯ ಸಹಕಾರ ನೀತಿ ಕರಡು ಅಂತಿಮ: ಸುರೇಶ್ ಪ್ರಭು

4ನೇ ಪುಟದಿಂದ...



**ಬೆಂಗಳೂರು :** ಸಹಕಾರ ಸಂಸ್ಥೆಗಳಿಗೆ ಸಮಾಜವನ್ನು ಪರಿವರ್ತಿಸುವ ಶಕ್ತಿ ಮತ್ತು ಸಾಮರ್ಥ್ಯವಿದೆ ಎಂದು ರಾಷ್ಟ್ರೀಯಸಹಕಾರ ನೀತಿ ಸಮಿತಿಯ ಅಧ್ಯಕ್ಷರಾದ ಸುರೇಶ್ ಪ್ರಭು ಹೇಳಿದರು.

ಪುಣೆಯ ವಾಮ್ನಿ ಕಾಮ್‌ನಲ್ಲಿರುವ ರಾಷ್ಟ್ರೀಯ ಸಹಕಾರ ನೀತಿ ಸಚಿವಾಲಯವು ದಕ್ಷಿಣ ವಲಯದಲ್ಲಿ ಹೊಸ ರಾಷ್ಟ್ರೀಯ ಸಹಕಾರ ನೀತಿ2023 ಕುರಿತು ನವೆಂಬರ್ 23, 2023 ರಂದು ಬೆಂಗಳೂರಿನಲ್ಲಿ ಏರ್ಪಡಿಸಿದ್ದ ಪ್ರಾದೇಶಿಕ ಕಾರ್ಯಗಾರದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ ಸಹಕಾರಿ ಕ್ಷೇತ್ರದ ಸಂಪೂರ್ಣ ಸಾಮರ್ಥ್ಯವನ್ನು ಬಳಸಿಕೊಳ್ಳಲು, ಕ್ಷೇತ್ರಕ್ಕಾಗಿ ಪ್ರತ್ಯೇಕ ಸಚಿವಾಲಯವನ್ನು ಸ್ಥಾಪಿಸಲಾಗಿದೆ. ಸಂಪೂರ್ಣ ಸಹಕಾರಿ ಪರಿಸರ ವ್ಯವಸ್ಥೆಯ ರಚನೆಯನ್ನು ಗಮನದಲ್ಲಿಟ್ಟುಕೊಂಡು ಹೊಸ ಸಹಕಾರ ನೀತಿ ಸಿದ್ಧಪಡಿಸಲಾಗುತ್ತಿದೆ. ಪ್ಯಾಕ್ಸ್‌ಗಳು ಮತ್ತು ತಳಮಟ್ಟದ ಉಪಕ್ರಮಗಳ ಮೂಲಕ ಕ್ರಿಯಾಶೀಲ ಸಹಕಾರ ಸಂಘಗಳನ್ನು ಉತ್ತೇಜಿಸುವ ನೀತಿಯ ಶಿಫಾರಸುಗಳು ಸಹಕಾರಿ ಕ್ಷೇತ್ರದಲ್ಲಿ ಹೊಸ ಶಕ್ತಿಯನ್ನು ತರುತ್ತವೆ ಎಂದರು.


ವಾಮ್ನಿಕಾಮ್‌ನ ನಿರ್ದೇಶಕಿ ಡಾ. ಹೇಮಾ ಯಾದವ್ ಅವರು ನೀತಿಯ ಮುಖ್ಯಾಂಶಗಳನ್ನು ವಿವಸಿದರು. ಸಹಕಾರ ಚಳವಳಿಯನ್ನು ಬಲಪಡಿಸುವುದು ಮತ್ತು ಆಳಗೊಳಿಸುವುದು, ಕಾನೂನು ಚೌಕಟ್ಟು ಮತ್ತು ಸಹಕಾರ ಕ್ಷೇತ್ರವನ್ನು ಉತ್ತೇಜಿಸುವುದು. ಪತ್ತಿನ ರಚನೆ ಮತ್ತು ಸಹಕಾರಿ ಮತ್ತು ಹಣಕಾಸು, ಮೂಲಸೌಕರ್ಯ ಮತ್ತು ತಂತ್ರಜ್ಞಾನ ಅಳವಡಿಕೆಯಂತಹ ಪ್ರಮುಖ ಶಿಫಾರಸುಗಳನ್ನು ಪ್ರಸ್ತುತಪಡಿಸಿದರು. ಶಿಕ್ಷಣ, ತರಬೇತಿ, ಸಂಶೋಧನೆ ಮತ್ತು ವಿಸ್ತರಣಾ ಸೇವೆಗಳು, ಸದಸ್ಯತ್ವ ಮತ್ತು ಸಾಮಾಜಿಕ ಸೇರ್ಪಡೆ ಕುರಿತು ಸಹ ಅವರು ವಿವರಿಸಿದರು.

ಆರ್‌ಬಿಐಕೇಂದ್ರ ಮಂಡಳಿಯ ನಿರ್ದೇಶಕ ಸತೀಶ್ ಮರಾಠೆ, ಗಾಂಧಿ ಗ್ರಾಮ್ ಗ್ರಾಮೀಣ ಸಂಸ್ಥೆಯ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ಸಿ.ಪಿಚೈ, ಬೆಂಗಳೂರಿನ ಚಾಣಕ್ಯ ವಿಶ್ವವಿದ್ಯಾನಿಲಯದ ಉಪಕುಲಪತಿ ಡಾ.ವೈ.ಡೋಂಗ್ರೆ ಅವರು ಮಾತನಾಡಿದರು.

ಕಾರ್ಯಾಗಾರದಲ್ಲಿ ಅಪರ ನಿಬಂಧಕರು ಹಾಗೂ ಸಹಕಾರಿ ಲೆಕ್ಕಪರಿಶೋಧನೆ ಇಲಾಖೆಯ ನಿರ್ದೇಶಕರಾದ ಎ.ಸಿ ದಿವಾಕರ್ ಅವರು ಆರಂಭದಲ್ಲಿ ಸ್ವಾಗತಿಸಿದರು.

ಈ ಸಭೆಯಲ್ಲಿ ಕೇರಳ, ಆಂಧ್ರಪ್ರದೇಶ, ಕರ್ನಾಟಕ, ತಮಿಳುನಾಡು, ತೆಲಂಗಾಣ, ಪುದುಚೇರಿ, ಅಂಡಮಾನ್ ನಿಕೋಬಾರ್ ದ್ವೀಪಗಳು, ಲಕ್ಷದ್ವೀಪಗಳು ಪ್ರತಿನಿಧಿಗಳು ಭಾಗವಹಿಸಿದ್ದರು.

# 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ
## ಸಹಕಾರ ರತ್ನ ಪ್ರಶಸ್ತಿ ಪ್ರದಾನ
## ಸಹಕಾರ ಕ್ಷೇತ್ರದ ಬೆಳವಣಿಗೆಗೆ ಸರ್ಕಾರದ ನೆರವು ಸದಾಸಿದ್ಧ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭರವಸೆ



**ವಿಜಯಪುರ** : ದೇಶದಲ್ಲಿ ಜಾತಿ, ಧರ್ಮದ ವ್ಯವಸ್ಥೆ ಇದ್ದರೂ ಜಾತ್ಯಾತೀತವಾಗಿ, ಪಕ್ಷಾತೀತವಾಗಿ ಕೆಲಸ ಮಾಡುವ ಕ್ಷೇತ್ರವಾಗಿ ಸಹಕಾರ ವಲಯ ಹೊರಹೊಮ್ಮಿದೆ. ಜನಸಾಮಾನ್ಯರ ಬದುಕಿನ ಎಲ್ಲಾ ಸ್ಥರಗಳನ್ನು ಆವರಿಸಿಕೊಂಡಿರುವ ಸಹಕಾರ ಕ್ಷೇತ್ರ ಬಲಿಷ್ಠವಾಗಿ ಬೆಳೆಯಬೇಕು. ಈ ನಿಟ್ಟಿನಲ್ಲಿ ಸಹಕಾರ ಬ್ಯಾಂಕುಗಳಲ್ಲಿ ಸರ್ಕಾರದ ಹಣವನ್ನು ಠೇವಣಿಯಾಗಿ ಇರಿಸಬೇಕೆಂಬ ಬೇಡಿಕೆಯನ್ನು ಮುಂದಿನ ದಿನಗಳಲ್ಲಿ ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ನೀಡಿದ್ದಾರೆ.

ವಿಜಯಪುರ ಡಿಸಿಸಿ ಬ್ಯಾಂಕ್ ಆವರಣದಲ್ಲಿ ದಿನಾಂಕ : 20.11.2023 ರಂದು ಕರ್ನಾಟಕ ರಾಜ್ಯ ಸಹಕಾರ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಸಕ್ಕರೆ ಕಾರ್ಖಾನೆಗಳ ಮಹಾಮಂಡಳ, ಕರ್ನಾಟಕ ರಾಜ್ಯ ವಿಮಾ ಸಹಕಾರ ಸಂಘ, ಬಸವೇಶ್ವರ ಸುದ್ದಿ ಮಾಧ್ಯಮ ಸಹಕಾರ ಮಹಾಮಂಡಳ ಹಾಗೂ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಮತ್ತು ರಾಜ್ಯದ ವಿವಿಧ ಸಹಕಾರ ಸಂಸ್ಥೆಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹದ ಸಮಾರೋಪ ಸಮಾರಂಭ, ಸಹಕಾರ ರತ್ನ ಪ್ರಶಸ್ತಿ ಪ್ರದಾನ ಹಾಗೂ ವಿಜಯಪುರ ಡಿಸಿಸಿ ಬ್ಯಾಂಕಿನ ಶತಮಾನೋತ್ಸವ ಭವನ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು.

ಮುಂದುವರೆದು, ಸಹಕಾರ ಚಳವಳಿ ಸ್ವಾತಂತ್ರ್ಯಪೂರ್ವದಲ್ಲಿಯೇ ಆರಂಭವಾಗಿದ್ದು, ಪ್ರಸ್ತುತ ರಾಜ್ಯದಲ್ಲಿ ಸುಮಾರು 45 ಸಾವಿರ ಸಹಕಾರ ಸಂಸ್ಥೆಗಳು, ಹಾಗೆಯೇ ದೇಶದಲ್ಲಿ 8.50 ಲಕ್ಷ ಸಹಕಾರ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ರಾಜ್ಯ ಹಾಗೂ ರಾಷ್ಟ್ರದ ಆರ್ಥಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದೆ ಎಂದರು.

ಯಾವುದೇ ಒಂದು ವಲಯದ ಬೆಳವಣಿಗೆಗೆ ಸಹಕಾರ ಬೇಕೇ ಬೇಕು. ಎಲ್ಲಾ ರಂಗಗಳಲ್ಲಿಯೂ ಸಹಕಾರ ಕ್ಷೇತ್ರ ತನ್ನ ಛಾಪನ್ನು ಮೂಡಿಸಿದ್ದು, ಜನರ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ತನ್ನದೇ ಆದ ಕೊಡುಗೆ ನೀಡುತ್ತಿದೆ ಎಂದು ಬಣ್ಣಿಸಿದರು.



## ಅಬಲವರ್ಗಕ್ಕೆ ಆಶ್ರಯ

ಒಂದು ಕಾಲದಲ್ಲಿ ಹಾಲು ಉತ್ಪಾದಕ ಸಹಕಾರ ಸಂಘಗಳಲ್ಲಿ ಅಬಲ ವರ್ಗದವರು ಹಾಲನ್ನು ಹಾಕದಂತಹ ಪರಿಸ್ಥಿತಿ ಇತ್ತು. ಆದರೆ ಸರ್ಕಾರವೇ ಅವರಿಗೆ ಷೇರು ಹಣವನ್ನು ಭರಿಸಿ, ಅವರನ್ನು ಸದಸ್ಯರನ್ನಾಗಿ ಮಾಡುವ ಮೂಲಕ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಹ ಸಹಕಾರ ಕ್ಷೇತ್ರದ ಪ್ರಯೋಜನಗಳು ದೊರಕುವಂತೆ ಮಾಡಿದೆ. ಇಂದು ಸರ್ಕಾರದ ಮೂಲಕ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್ 5 ರೂ. ಸಹಾಯಧನ ನೀಡಲಾಗುತ್ತಿದೆ. ಹಾಗೆಯೇ ಸರ್ಕಾರದ ಕ್ಷೀರಭಾಗ್ಯ ಯೋಜನೆಯ ಮೂಲಕ ಉತ್ಪಾದನೆಯಾದ ಹಾಲನ್ನು ಸದುಪಯೋಗಪಡಿಸಿಕೊಳ್ಳುತ್ತಿದ್ದು, ಈ ಯೋಜನೆಯ ಮೂಲಕ ವರ್ಷಕ್ಕೆ 1200 ಕೋಟಿ ರೂ. ಅನುದಾನವನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು. ಸಹಕಾರ ಸಂಸ್ಥೆಗಳ ಮೂಲಕ ರೈತರಿಗೆ ಸಾಲ ಮನ್ನಾ ಯೋಜನೆಯನ್ನು ರೂಪಿಸಿಕೊಡಲಾಗಿದೆ. ವರ್ಷದಲ್ಲಿ ರೂ. 3 ಲಕ್ಷದಿಂದ ರೂ. 5 ಲಕ್ಷದವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ ಕೊಡುವ ನಿರ್ಧಾರವನ್ನು ನಮ್ಮ ಸರ್ಕಾರ ತೆಗೆದುಕೊಂಡಿದೆ. ರೈತರಿಗೆ ಸಕಾಲದಲ್ಲಿ ಸಾಲ ದೊರೆತರೆ ಅವರ ಬದುಕು ಹಸನಾಗುತ್ತದೆ. ಆದ್ದರಿಂದ ಸಹಕಾರ ಕ್ಷೇತ್ರ ರೈತರ ಬೆನ್ನೆಲುಬಾಗಿ ನಿಲ್ಲಲು ಅಗತ್ಯವಿರುವ ಎಲ್ಲಾ ಸಹಕಾರವನ್ನು ಸಹ ನಮ್ಮ ಸರ್ಕಾರ ನೀಡಲು ಸಿದ್ಧವಿದೆ ಎಂದು ಅವರು ತಿಳಿಸಿದರು.

**ಧ್ವಜಾರೋಹಣ :** ಕಾರ್ಯಕ್ರಮದಲ್ಲಿ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಅವರು ಸಹಕಾರ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡುತ್ತಾ, ಸಹಕಾರ ಸಂಸ್ಥೆಗಳ ಸಿಬ್ಬಂದಿಗಳಿಗೆ ಸೇವಾ ಭದ್ರತೆ ಒದಗಿಸಲು, ಸಹಕಾರಿ ಆಂದೋಲನವನ್ನು ಮತ್ತಷ್ಟು ಗಟ್ಟಿಗೊಳಿಸಲು ಸಹಕಾರ ಕಾಯಿದೆ ಹಾಗೂ ಕಾನೂನಿಗೆ ಅಗತ್ಯ ತಿದ್ದುಪಡಿ ತರಲು ಈಗಾಗಲೇ ಸಹಕಾರ ಕಾನೂನು ತಿದ್ದುಪಡಿ ಸಮಿತಿಯನ್ನು ರಚಿಸಲಾಗಿದೆ. ಸಹಕಾರ ಚಳವಳಿಯನ್ನು ಜನರ ಆಂದೋಲನವನ್ನಾಗಿ ಪರಿವರ್ತಿಸಲು ಪ್ರಯತ್ನ ನಡೆಸಲಾಗುತ್ತಿದೆ. ಆಡು ಮುಟ್ಟದ ಸೊಪ್ಪಿಲ್ಲ ಎನ್ನುವ ಮಾತಿಗೆ ಪೂರಕವಾಗಿ ಸಹಕಾರ ಕ್ಷೇತ್ರ ಪ್ರವೇಶಿಸದ ರಂಗವಿಲ್ಲ. ಆದ್ದರಿಂದ ಸಹಕಾರ ಕ್ಷೇತ್ರವನ್ನು ಬಲಪಡಿಸಲು ಅಗತ್ಯವಿರುವ ಎಲ್ಲಾ ಸಹಕಾರವನ್ನು ನಾವು ನೀಡಬೇಕು ಎಂದರು.

ಸಕ್ಕರೆ, ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವರು ಹಾಗೂ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಶಿವಾನಂದ ಪಾಟೀಲ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಯಾವುದೇ ಪಕ್ಷ, ಜಾತಿ ಹಾಗೂ ಧರ್ಮಕ್ಕೆ ಸೀಮಿತವಾಗದೆ ಸಹಕಾರ ವಲಯ ಇನ್ನಷ್ಟು ಬಲಿಷ್ಠವಾಗಿ ಬೆಳೆಯಬೇಕು. ಸಹಕಾರಿ ಬ್ಯಾಂಕುಗಳಿಗೆ ಸರ್ಕಾರದ ಹಣವನ್ನು ಠೇವಣಿ ಇಟ್ಟುಕೊಳ್ಳುವಂತೆ ಶಕ್ತಿ ತುಂಬಬೇಕು ಎಂದು ತಿಳಿಸಿದರು.

ಯಾವುದೇ ಸರ್ಕಾರ ಬಂದರೂ ಸಹಕಾರಿ ರಂಗಕ್ಕೆ ಪೂರಕವಾಗಿ ಅಗತ್ಯವಾದ ಸಹಕಾರವನ್ನು ನೀಡುತ್ತಾ ಬಂದಿವೆ. ಅದೇ ರೀತಿ ನಮ್ಮ ಸರ್ಕಾರವು ಸಹಕಾರಿ ಕ್ಷೇತ್ರಕ್ಕೆ ಅವಶ್ಯವಿರುವ ಸಹಕಾರ ಹಾಗೂ ಹೆಚ್ಚಿನ ಶಕ್ತಿಯನ್ನು ತುಂಬಿದರೆ ಕರ್ನಾಟಕವೂ ಕೂಡ ಸಹಕಾರಿ ರಂಗದಲ್ಲಿ ಮಹಾರಾಷ್ಟ್ರ ಹಾಗೂ ಗುಜರಾತ್‌ಗಿಂತಲೂ ಹೆಚ್ಚಿನ ಸಾಧನೆಯನ್ನು ಮಾಡುತ್ತದೆ. ನಬಾರ್ಡ್ ತನ್ನ ಪಾಲಿನ ರಿಯಾಯಿತಿ ಸಕಾಲಕ್ಕೆ ಬಿಡುಗಡೆ ಮಾಡುವಂತೆ ಕ್ರಮವಹಿಸಬೇಕು. ವ್ಯವಸಾಯ ಹಾಗೂ ತೋಟಗಾರಿಕೆ ಕ್ಷೇತ್ರಕ್ಕೆ ಹೆಚ್ಚಿನ ಸಹಕಾರವನ್ನು ನೀಡುವ ಮೂಲಕ ರೈತಾಪಿ ವರ್ಗದವರಿಗೆ ಸಹಕಾರ ರಂಗ ಬೆನ್ನೆಲುಬಾಗಿ ನಿಲ್ಲಬೇಕು ಎಂದರು.

## ಬೆರಳಚ್ಚಿನ ಮೂಲಕ ಬ್ಯಾಂಕ್ ಖಾತೆಗೆ ಕನ್ನ, ರಾಜ್ಯಾದ್ಯಂತ ವ್ಯಾಪಿಸಿದ ವಂಚನೆ

**ಬೆಳಗಾವಿ:** ಕರ್ನಾಟಕ ರಾಜ್ಯಾದ್ಯಂತ ಆನ್‌ಲೈನ್ ವಂಚನೆ ಹೆಚ್ಚುತ್ತಿದ್ದು, ಇದೀಗ ಆಧಾರ್ ಕಾರ್ಡ್‌ನ ಬೆರಳಚ್ಚು ಹ್ಯಾಕ್ ಮಾಡಿ ಬ್ಯಾಂಕ್ ಖಾತೆಗಳಿಂದ ಹಣ ದೋಚುವ ಹಂತಕ್ಕೂ ತಲುಪಿದೆ. ಬೃಹತ್ ಪ್ರಮಾಣದಲ್ಲಿ ಸಣ್ಣ ಮೊತ್ತವನ್ನು ಕಳ್ಳತನ ಮಾಡಲಾಗುತ್ತಿದ್ದು, 2ರಿಂದ 8 ಸಾವಿರ ರೂಪಾಯಿ ಕಳೆದುಕೊಂಡವರು ಹೆಚ್ಚಾಗಿ ಪೊಲೀಸ್ ಠಾಣೆಗಳಲ್ಲಿ ದೂರು ನೀಡದೆ ಸುಮ್ಮನಾಗುತ್ತಿರುವುದು ವಂಚಕರಿಗೆ ಅನುಕೂಲವಾಗುತ್ತಿದೆ. ಇಂತಹ ಪ್ರಕರಣ ದಿನವೂ ಒಂದಿಲ್ಲೊಂದು ವರದಿಯಾಗುತ್ತಿದ್ದು, 10–15 ಸಾವಿರ ರೂ.ಗೂ ಅಧಿಕ ಹಣ ಕಳೆದುಕೊಂಡವರು ಮಾತ್ರವೇ ದೂರು ನೀಡುತ್ತಿದ್ದಾರೆ. ಇಂತಹ 30ಕ್ಕೂ ಅಧಿಕ ಪ್ರಕರಣಗಳು ಈಗಾಗಲೇ ಬೆಳಗಾವಿಯ ಸಿಇಎನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

### ಏಜೆಂಟರಿಂದಲೇ ಮಾಹಿತಿ ಸೋರಿಕೆ?

ಕಳೆದೊಂದು ತಿಂಗಳಿನಿಂದ ಬೆಳಗಾವಿ ಜಿಲ್ಲೆ ಮಾತ್ರವಲ್ಲದೇ ಇಡೀ ರಾಜ್ಯಾದ್ಯಂತ ಇಂತಹ ಪ್ರಕರಣಗಳು ವರದಿಯಾಗುತ್ತಿವೆ. ಬೆರಳಚ್ಚು ಪಡೆದು ಖಾತೆಯಿಂದ ಹಣ ತೆಗೆದುಕೊಡಲು ಬ್ಯಾಂಕ್‌ನವರೇ ಅನುಮತಿ ನೀಡಿರುವ ಏಜೆಂಟರಿಂದಲೇ ಬಯೋಮೆಟ್ರಿಕ್ ದತ್ತಾಂಶ ಸೋರಿಕೆ ಆಗುತ್ತಿರುವ ಶಂಕೆ ಇದೆ. ಇ–ಕೆವೈಸಿ, ಸಿಮ್ ಖರೀದಿ ಹಾಗೂ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸುವಾಗಲೂ ನೀಡುವ ಬಯೋಮೆಟ್ರಿಕ್ ಮಾಹಿತಿ ಈ ಖದೀಮರ ಕೈ ಸೇರಿರುವ ಸಾಧ್ಯತೆ ಇದೆ.

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ವಿ. ರಾಜು ಅವರಿಗೆ ಅಭಿನಂದನೆ ಸಲ್ಲಿಕೆ




ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ವಿ. ರಾಜು ಅವರನ್ನು ಶಿವಮೊಗ್ಗದಲ್ಲಿ ದೈವಜ್ಞ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ವತಿಯಿಂದ ಸನ್ಮಾನಿಸಿ, ಅಭಿನಂದಿಸಿ, ಶುಭ ಕೋರಲಾಯಿತು.

## ಅಧ್ಯಕ್ಷರ ಕಿರು ಪರಿಚಯ



ಶ್ರೀ ವಿ. ರಾಜು, ಅಧ್ಯಕ್ಷರು

ಶ್ರೀ ವಿ. ರಾಜು ರವರು ಸಹಕಾರಿ ಕ್ಷೇತ್ರದಲ್ಲಿ ಹಲವು ದಶಕಗಳಿಂದ ಇವರು ಸೇವೆ ಸಲ್ಲಿಸುತ್ತಿದ್ದಾರೆ. 1985–86ರಲ್ಲಿ ಶಿವಮೊಗ್ಗ ನಗರದ ಪ್ರತಿಷ್ಠಿತ ದುರ್ಗಿಗುಡಿ ಕೋ–ಆಪರೇಟಿವ್ ಸೊಸೈಟಿ ಲಿ., ಇದರ ನಿರ್ದೇಶಕರಾಗಿ ಹಾಗೂ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು. ಇವರ ಅಧ್ಯಕ್ಷತೆಯಲ್ಲಿ ಅಂದಿನ ಮುಖ್ಯಮಂತ್ರಿಗಳಾದ ಶ್ರೀ ಜೆ.ಎಚ್. ಪಟೇಲ್ ರವರ ಅಮೃತ ಹಸ್ತದಿಂದ ದಿ॥ ಎಸ್. ರಾಮಯ್ಯ ವಾಣಿಜ್ಯ ಸಂಕೀರ್ಣವನ್ನು ನಿರ್ಮಿಸಿ ಉದ್ಘಾಟನೆ ಮಾಡಿಸಿದರು.

1996–97ನೇ ಸಾಲಿನಲ್ಲಿ ಶಿವಮೊಗ್ಗ–ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಶಿವಮೊಗ್ಗ ಜಿಲ್ಲಾ ಸಹಕಾರ ಒಕ್ಕೂಟದ ನೂತನ ಕಟ್ಟಡಕ್ಕೆ ರೂ. 50,000/–ಗಳನ್ನು ಅನುದಾನ ಬಿಡುಗಡೆ ಮಾಡಿದ್ದರು. 2004ನೇ ಸಾಲಿನಲ್ಲಿ ಕರ್ನಾಟಕ ಕ್ರಂಟಾಕ್ಟರ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಶಿವಮೊಗ್ಗ ಇಲ್ಲಿ ಸ್ಥಾಪಕ ನಿರ್ದೇಶಕರಾಗಿ ಸೇವೆ ಸಲ್ಲಿಸಿರುತ್ತಾರೆ.

2010ರಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಥಮ ಬಾರಿಗೆ ಸಹಕಾರಿ ಕ್ಷೇತ್ರದ ಪ್ರತಿನಿಧಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ಜಿಲ್ಲಾ ಸಹಕಾರ ಮನರಂಜನಾ ಕೇಂದ್ರ ಸ್ಥಾಪಕ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ. 2011–12ನೇ ಸಾಲಿನಲ್ಲಿ ಶಿವಮೊಗ್ಗ ನಗರದಲ್ಲಿ ನೂತನವಾಗಿ ಜಿಲ್ಲಾ ಮಟ್ಟದ ಶ್ರೀ ಕಂಚಿ ಕಾಮಾಕ್ಷಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಇದರ ಸ್ಥಾಪಕ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. 2012ನೇ ಸಾಲಿನ ಬೆಂಗಳೂರಿನಲ್ಲಿ ನಡೆದ ಅಖಿಲ ಭಾರತ ಸಹಕಾರ ಸಪ್ತಾಹ ಆಚರಣೆಯಲ್ಲಿ "ಶ್ರೇಷ್ಠ ಸಹಕಾರಿ" ಎಂಬ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

2013–14ನೇ ಸಾಲಿನಲ್ಲಿ ಮಡಿಕೇರಿಯಲ್ಲಿ ನಡೆದ 61ನೇ ಅಖಿಲ ಭಾರತ ಸಹಕಾರ ಸಪ್ತಾಹದ ಆಚರಣೆಯಲ್ಲಿ ಉತ್ತಮ ಸಹಕಾರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. 2021ನೇ ಸಾಲಿನ ಅಖಿಲ ಭಾರತ ಸಹಕಾರ ಸಪ್ತಾಹದ ಆಚರಣೆಯಲ್ಲಿ ರಾಜ್ಯ ಸರ್ಕಾರವು ಸಹಕಾರ ಕ್ಷೇತ್ರದಲ್ಲಿ ಅವರ ಸೇವೆಯನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

2022ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಡಿ. ದೇವರಾಜು ಅರಸು ಜಿಲ್ಲಾ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಹಕಾರ, ರಾಜಕೀಯ, ಧಾರ್ಮಿಕ, ಸಾಮಾಜಿಕ ಕ್ಷೇತ್ರಗಳಲ್ಲಿ ಸಕ್ರೀಯವಾಗಿರುವ ಶ್ರೀ ವಿ.ರಾಜು ರವರು 2004–05ನೇ ಸಾಲಿನಲ್ಲಿ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯದಲ್ಲಿ ರಾಜ್ಯ ಪತ್ತಿನ ಸಹಕಾರ ಸಂಘಗಳ ಮಹಾಮಂಡಳದ ಸ್ಥಾಪಕ ನಿರ್ದೇಶಕರಾಗಿ, ತದನಂತರ ಸ್ಥಾಪಕ ಉಪಾಧ್ಯಕ್ಷರಾಗಿ, ಹಾಗೂ ಈಗ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿ ಸೇವೆಸಲ್ಲಿಸುತ್ತಿದ್ದಾರೆ.

## 70ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಸಹಕಾರ ಚಳವಳಿ ಆರ್ಥಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ : ಸಹಕಾರ ಸಚಿವ ಕೆ.ಎನ್. ರಾಜಣ್ಣ

### ಸಹಕಾರ ವಲಯ ಜನರ ಸ್ವಾವಲಂಬಿ ಬದುಕಿನ ಆಸರೆಯಾಗಿದೆ : ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್



**ಮಂಗಳೂರು :** ಸಹಕಾರಿ ಆಂದೋಲನವು ಕರಾವಳಿಯ ಗ್ರಾಮೀಣ ಜನರ ಆರ್ಥಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದೆ. ಈ ಮುಖೇನ ಸಹಕಾರಿ ಆಂದೋಲನ ಇಲ್ಲಿ ಬಲವರ್ಧನೆಗೊಂಡಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ದ.ಕ. ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಹಾಗೂ ಜಿಲ್ಲೆಯ ಸಹಕಾರ ಸಂಘಗಳ ಸಹಯೋಗದೊಂದಿಗೆ ನಗರದ ಉರ್ವ ಮೈದಾನದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ 70ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಉದ್ಘಾಟಿಸಿ ಮಾತನಾಡಿದರು.

ಸಹಕಾರಿ ಕ್ಷೇತ್ರದಲ್ಲಿ ಜಾತ್ಯತೀತ ಹಾಗೂ ಪಕ್ಷಾತೀತವಾಗಿ ಕರ್ತವ್ಯ ನಿರ್ವಹಿಸಬೇಕು. ಡಾ। ಎಂ. ಎನ್. ರಾಜೇಂದ್ರ ಕುಮಾರ್ ಯಶಸ್ವಿ ಸಹಕಾರಿ ತಜ್ಞನಾಗಿ ಜನರ ನಿರೀಕ್ಷೆಗೆ ತಕ್ಕ ಹಾಗೆ ಕಾರ್ಯ ನಿರ್ವಹಿಸಿದ್ದಲ್ಲದೆ ವಾಣಿಜ್ಯ ಬ್ಯಾಂಕ್‌ಗಳಿಗೆ ಸಮಾನವಾಗಿ ಸ್ಪರ್ಧೆ – ನೀಡುವ ಮಟ್ಟಕ್ಕೆ ಸಹಕಾರಿ ಕ್ಷೇತ್ರವನ್ನು ಬೆಳೆಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ದೇಶದ ಆರ್ಥಿಕ ವ್ಯವಸ್ಥೆ ಹೆಚ್ಚಾಗಬೇಕು ಅದಕ್ಕಾಗಿ ಗ್ರಾಮೀಣ ಮಟ್ಟದಲ್ಲಿ ಹೆಚ್ಚು ಚಟುವಟಿಕೆಗಳು ಪ್ರಾರಂಭವಾಗಬೇಕು. ಗ್ರಾಮೀಣ ಜನರು ಬೆಳೆದ ಉತ್ಪನ್ನಗಳಿಗೆ ಮಾರುಕಟ್ಟೆ ದೊರಕಿದಾಗ ಗ್ರಾಮೀಣ ಆರ್ಥಿಕತೆ ಅಭಿವೃದ್ದಿ ಹೊಂದುತ್ತದೆ. ಇದಕ್ಕೆ ಉತ್ತಮ ಉದಾಹರಣೆಯಾಗಿ ನಾವು 38 ಸಾವಿರ ನವೋದಯ ಸ್ವಸಹಾಯ ಸಂಘಗಳ ಮೂಲಕ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಂಡಿರುವುದನ್ನು ನೋಡಬಹುದು ಎಂದರು.

ಸಮಾರಂಭದಲ್ಲಿ ವಸ್ತು ಪ್ರದರ್ಶನ ಮಳಿಗೆಗಳ ಉದ್ಘಾಟನೆ ನೆರವೇರಿಸಿದ ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಮಾತನಾಡಿ, ಜನಸಾಮಾನ್ಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕಾರಿ ವ್ಯವಸ್ಥೆ ಉತ್ತಮ ವೇದಿಕೆಯಾಗಿದೆ. ಸಹಕಾರಿ ವಲಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉತ್ತಮ ಸಾಧನೆ ಮಾಡಿದ್ದು ಅಬಲ ವರ್ಗದವರ ಆಶಾಕಿರಣವಾಗಿದೆ. ಡಾ. ಎಂ.ಎನ್. ರಾಜೇಂದ್ರ ಕುಮಾರ್ ಅವರ ನೇತೃತ್ವದಲ್ಲಿ ಸಪ್ತಾಹವನ್ನು ಉತ್ತಮವಾಗಿ ಆಯೋಜಿಸಲಾಗಿದ್ದು, ಇಲ್ಲಿ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗಿ ಚಿಂತನ – ಮಂಥನ ನಡೆಯಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಎಂ.ಎನ್. ರಾಜೇಂದ್ರ ಕುಮಾರ್ ವಹಿಸಿ, ಮಾತನಾಡಿ, ಯಾವುದೇ ಕ್ಷೇತ್ರದ ಅಭಿವೃದ್ಧಿ ಸಹಕಾರದಿಂದ ಮಾತ್ರ ಸಾಧ್ಯ ಇದನ್ನು ಮನಗಂಡು ಕೇಂದ್ರ ಸರಕಾರವು ಸಹಕಾರ ಕ್ಷೇತ್ರಕ್ಕೆ ಪ್ರತ್ಯೇಕ ಸಚಿವಾಲಯ ಸ್ಥಾಪಿಸಿದೆ. ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಹಿಳೆಯರು ಸ್ವಾವಲಂಬನೆ ಆಗಿರುವುದು ಸಹಕಾರಿ ಕ್ಷೇತ್ರದ ಮೂಲಕ ಎಂದರು.

ಸಹಕಾರಿ ಧ್ವಜಾರೋಹಣವನ್ನು ನೆರವೇರಿಸಿದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ ದೇವೇಗೌಡ ಅವರು ಮಾತನಾಡಿ, ನಮ್ಮ ರಾಜ್ಯದಲ್ಲಿಯೇ ದಕ್ಷಿಣ ಕನ್ನಡ ಜಿಲ್ಲೆ ಸಹಕಾರಿ ಆಂದೋಲನದಲ್ಲಿ ಉತ್ತಮ ಸಾಧನೆ ಮಾಡಿದೆ. ಇನ್ನು ಎಂ.ಎನ್ ರಾಜೇಂದ್ರ ಕುಮಾರ್ ಅವರು ಅತ್ಯಂತ ನಂಬಿಕೆ ವಿಶ್ವಾಸ ಗಳಿಸಿರುವ ಸಹಕಾರಿ ಮುಖಂಡರಾಗಿದ್ದು ಸಹಕಾರಿ ಚಳವಳಿಯನ್ನು ಉತ್ತಮವಾಗಿ ಜಿಲ್ಲೆಯಲ್ಲಿ ಅಭಿವೃದ್ಧಿ ಪಡಿಸಿದ್ದಾರೆ ಇಂತಹ ಕ್ಷೇತ್ರದಲ್ಲಿ ಯುವಜನರು ಆಸಕ್ತಿ ತಳೆಯಬೇಕು ಎಂದರು.

ಉತ್ತಮ ಸ್ವ– ಸಹಾಯ ಸಂಘಗಳನ್ನು ಗೌರವಿಸಿದ ಸಂಸದ ನಳಿನ್ ಕುಮಾರ್ ಕಟೀಲು ಅವರು ಮಾತನಾಡಿ, ಕರಾವಳಿಯಲ್ಲಿ ಸಹಕಾರಿ ಕ್ಷೇತ್ರವನ್ನು ಮೊಳಹಳ್ಳಿ ಶಿವರಾಯರಿಂದ ಇಂದಿನವರೆಗೆ ಆರ್ಥಿಕ ವ್ಯವಹಾರದ ಶಕ್ತಿಯಾಗಿ ಬೆಳೆಸಿರುವುದು ಮಾದರಿಯಾಗಿದೆ. ಮುಂದಿನ ದಿನಗಳಲ್ಲಿ ಸಹಕಾರ ಕ್ಷೇತ್ರ ಮತ್ತಷ್ಟು ಬಲಿಷ್ಠವಾಗಿ ಬೆಳೆಯಲಿ ಎಂದು ಹೇಳಿದರು.

ಶಾಸಕರಾದ ಡಿ.ಡಿ. ವೇದವ್ಯಾಸ ಕಾಮತ್, ಯಶ್‌ಪಾಲ್ ಎ.



ಸುವರ್ಣ, ಮೇಯರ್ ಸುಧೀರ್ ಶೆಟ್ಟಿ ಕಣ್ಣೂರು, ಉದ್ಯಮಿ ರೋಹನ್ ಮೊಂತೇರೊ ದಕ, ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದ ಅಧ್ಯಕ್ಷ ಕೆ.ಪಿ. ಸುಚರಿತ ಶೆಟ್ಟಿ, ಎಸ್‌ಸಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ವಿನಯ್ ಕುಮಾರ್ ಸೂರಿಂಜೆ, ಸಿಇಒ ಕೆ. ಗೋಪಾಲಕೃಷ್ಣ ಭಟ್, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್.ನವೀನ್, ಸಹಕಾರ ಮಾರಾಟ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಆರ್. ಶ್ರೀಧರ್, ಲಿಂಗರಾಜು, ಎಸ್. ಸಿಡಿಸಿಸಿ ಬ್ಯಾಂಕ್ ನಿರ್ದೇಶಕರು ಹಾಗು ಸಹಕಾರಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾರಾಟ ಸಹಕಾರ ಮಹಾಮಂಡಳದ ನಿರ್ದೇಶಕ ಐಕಳಬಾವ ದೇವಿಪ್ರಸಾದ್ ಶೆಟ್ಟಿ ಬೆಳಪು ಸ್ವಾಗತಿಸಿದರು. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರು ಹಾಗು ಉಡುಪಿ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ಜಯಕರ ಶೆಟ್ಟಿ ಇಂದ್ರಾಳಿಯವರು ಸಪ್ತಾಹದ ಆಚರಣೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ದ.ಕ. ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಬೆಳ್ಳಿಪಾಡಿ ಪ್ರಾಸಾದ್‌ಕೌಶಲ್ ಶೆಟ್ಟಿ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದ ಪೂರ್ವದಲ್ಲಿ ಎಸ್‌ಸಿಡಿಸಿಸಿ ಬ್ಯಾಂಕ್ ಬಳಿಯಿಂದ ಉರ್ವ ಮೈದಾನದವರೆಗೆ 'ಸಹಕಾರ ಜಾಥಾ' ಸಾಗಿಬಂತು. ಸಮಾರಂಭದಲ್ಲಿ ನಂದಿನಿಯ ಉತ್ಪನ್ನಗಳನ್ನು ಬಿಡುಗಡೆ ಮಾಡಲಾಯಿತು.

### ಪ್ರಶಸ್ತಿ ಪಡೆದ ಸಂಘಗಳು

ಮೂಡುಬಿದಿರೆ ಸೇವಾ ಸಹಕಾರಿ ಸಂಘ ನಿ. ಮಂಗಳೂರು, ಬ್ರಹ್ಮಾವರ ವ್ಯವಸಾಯ ಸೇವಾ.ಸ. ಸಂಘ–ಉಡುಪಿ, ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ–ಆಪ್ ಸೊಸೈಟಿ ಲಿ. ಮಂಗಳೂರು, ಶ್ರೀ ಚೇರುಂಬಾ ಕ್ರೆಡಿಟ್ ಕೋ–ಆಪ್ ಸೊಸೈಟಿ, ಬಡಗಬೆಟ್ಟು ಕ್ರೆಡಿಟ್ ಕೋ–ಆಪ್, ಸೊಸೈಟ ಉಡುಪಿ, ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘ ಮಂಗಳೂರು, ಆದರ್ಶ' ವಿವಿಧೋದ್ದೇಶ ಸ.ಸಂಘ ಮಂಗಳೂರು, ಎಸ್. ಕೆ. ಗೋಲ್ಡ್‌ಸ್ಮಿತ್ ಇಂಡಸ್ಟ್ರಿಯಲ್ ಕೋ–ಆಪ್ ಸೊಸೈಟಿ ಮಂಗಳೂರು, ಮಹಾಲಕ್ಷ್ಮೀ ಕೋ–ಆಪ್ ಬ್ಯಾಂಕ್ ಉಡುಪಿ, ಒಡಿಯೂರು ಶ್ರೀ ವಿವಿಧೋದ್ದೇಶ ಸೌ. ಸಹಕಾರಿ ಮಂಗಳೂರು, ತಣ್ಣೀರುವಂತ ಹಾಲು ಉತ್ಪಾದಕರ ಸಹಕಾರ ಸಂಘ, ಕೊಡವೂರು ಹಾಲು ಉತ್ಪಾದಕರ ಸಹಕಾರಿ ಸಂಘ ಉಡುಪಿ, ಮಂಗಳೂರು ಯಾಂತ್ರಿಕ ಮೀನುಗಾರರ ಸಹಕಾರಿ ಸಂಘ, ಬೀಜಾಡಿ ಮೀನುಗಾರರ ಸಹಕಾರಿ ಸಂಘ ನಿ. ಕುಂದಾಪುರ, ಕೊಡವೂರು ವ್ಯವಸಾಯ ಸೇವಾ ಸಹಕಾರಿ ಸಂಘ ನಿ. ಉಡುಪಿಗೆ ಉತ್ತಮ ಸಹಕಾರ ಸಂಘಗಳು' ಪ್ರಶಸ್ತಿ ಮತ್ತು ಸುಳ್ಯದ ಕನಕಮಜಲು ದುರ್ಗಾಂಬಿಕಾ ನವೋದಯ ಸ್ವಸಹಾಯ ಸಂಘ ಹಾಗೂ ಕುಂದಾಪುರ ಅಂಪಾರಿನ ನವ್ಯ ನವೋದಯ ಸ್ವಸಹಾಯ ಸಂಘ ಉತ್ತಮ ನವೋದಯ ಸಂಘಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.



## 70ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಸಹಕಾರ ಕ್ಷೇತ್ರದ ಬೆಳವಣಿಗೆಗೆ ನಿಸ್ವಾರ್ಥ ಸೇವಾ ಮನೋಭಾವನೆ ಅಗತ್ಯ : ಸಚಿವ ಡಾ। ಶರಣ ಪ್ರಕಾಶ್ ಪಾಟೀಲ್



**ರಾಯಚೂರು :** ಸೇವಾ ಮನೋಭಾವದ ಜೊತೆಗೆ ಪ್ರಾಮಾಣಿಕತೆ, ನಿಸ್ವಾರ್ಥತೆ ಹಾಗೂ ಸಮಾಜದ ಬಗ್ಗೆ ಕಳಕಳಿಯನ್ನು ಹೊಂದಿದಾಗ ಮಾತ್ರ ಸಹಕಾರ ಕ್ಷೇತ್ರ ಬೆಳೆಯಲು ಸಾಧ್ಯ. ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಶ್ರಮಿಸಬೇಕೆಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ। ಶರಣ ಪ್ರಕಾಶ್ ಆರ್. ಪಾಟೀಲ್ ರವರು ತಿಳಿಸಿದರು.

ಅವರು ರಾಯಚೂರಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಎಣ್ಣೇಬೀಜ ಬೆಳೆಗಾರರ ಸಹಕಾರ ಮಹಾಮಂಡಳ, ಜಿಲ್ಲಾ ಸಹಕಾರ ಒಕ್ಕೂಟ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ, ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ, ರಾಜ್ಯ ಸಹಕಾರ ಕುರಿ ಮೇಕೆ ಸಾಕಾಣಿಕೆದಾರರ ಮಹಾಮಂಡಳ ಮತ್ತು ರಾಯಚೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಹಾಗೂ ಜಿಲ್ಲೆಯ ವಿವಿಧ ಸಹಕಾರ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹದ ರಾಜ್ಯಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು, ಸಹಕಾರ ವಲಯ ಜೀವನದ ಎಲ್ಲಾ ಆಯಾಮಗಳನ್ನು ಆವರಿಸಿಕೊಂಡಿದ್ದು, ಪ್ರತಿಯೊಬ್ಬರೂ ಈ ಕ್ಷೇತ್ರದ ಮೇಲೆ ಅವಲಂಬಿತರಾಗಿದ್ದಾರೆ. ಸಮಾಜದಲ್ಲಿ ಬದಲಾವಣೆ ತರುವ ಶಕ್ತಿಯನ್ನು ಸಹಕಾರಿ ಕ್ಷೇತ್ರ ಹೊಂದಿದೆ. ಎಲ್ಲರನ್ನು ಸಮಾನವಾಗಿ ಕಾಣಲು, ಸ್ವಾವಲಂಬಿಯಾಗಿ ಬದುಕುವಂತೆ ಪ್ರೇರೇಪಿಸುವ ಮಹಾನ್‌ಶಕ್ತಿ ಸಹಕಾರ ಕ್ಷೇತ್ರಕ್ಕಿದೆ. ಆದ್ದರಿಂದ ಇಂತಹ ಕ್ಷೇತ್ರದ ಬೆಳವಣಿಗೆಗೆ ನಿಸ್ವಾರ್ಥ



ಸೇವಾ ಮನೋಭಾವನೆ ಅಗತ್ಯವಾಗಿದೆ ಎಂದರು. ಯುವಜನರು ಈ ಒಂದು ಕ್ಷೇತ್ರವನ್ನು ಉತ್ತಮವಾಗಿ ಬಳಸಿಕೊಂಡರೆ ಅವರಿಗೆ ಭವ್ಯ ಭವಿಷ್ಯವಿದೆ. ರಾಜ್ಯ ಹಾಗೂ ರಾಷ್ಟ್ರದ ಆರ್ಥಿಕತೆಯ ಬೆಳವಣಿಗೆಯಲ್ಲಿ ಹೊಸ ಹೊಸ ಪ್ರಯತ್ನಗಳನ್ನು ತರಲು ಸಹಕಾರಿ ಸಂಘಗಳು ಮುಂದೆ ಬರಬೇಕು ಎಂದು ಅಭಿಪ್ರಾಯಪಟ್ಟರು.

ಸಹಕಾರ ಚಳವಳಿ ರಾಜ್ಯ, ದೇಶ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ಮಾಡಿದೆ. ಗುಜರಾತ್, ಮಹಾರಾಷ್ಟ್ರ, ಕರ್ನಾಟಕ ಸೇರಿದಂತೆ ಎಲ್ಲಡೆಯು ಸಹಕಾರ ಚಳವಳಿ ಉತ್ತಮ ಸಾಧನೆ ಮಾಡಿದ್ದು, ಯಾವುದೋ ಒಂದು ಸಂಸ್ಥೆಯಲ್ಲಿ ಕಂಡುಬರುತ್ತಿರುವ ಲೋಪದೋಷಗಳು ಸಹಕಾರ ವಲಯದ ಮೇಲೆ ವ್ಯತಿರಿಕ್ತವಾದ ಪರಿಣಾಮ ಬೀರುತ್ತಿದೆ. ಆದ್ದರಿಂದ ಈ ಕುರಿತು ಸಹಕಾರಿಗಳೆಲ್ಲರೂ ಚಿಂತನ ಮಂಥನ ಮಾಡಬೇಕಾಗಿದೆ. ನಾಯಕತ್ವ ಗುಣವನ್ನು ಬೆಳೆಸಿಕೊಳ್ಳಲು ಸಮಾಜಕ್ಕೆ ಏನಾದರೂ ಸೇವೆಯನ್ನು ಸಲ್ಲಿಸಬೇಕು ಎಂಬ ಆಸೆಯನ್ನು ಹೊಂದಿದವರಿಗೆ ಸಹಕಾರಿ ವಲಯ ಉತ್ತಮವಾದ ವೇದಿಕೆಯಾಗಿದೆ. ಆದ್ದರಿಂದ ಹಿರಿಯ ಸಹಕಾರಿಗಳು ಯುವಜನರಿಗೆ ಮಾರ್ಗದರ್ಶನ ನೀಡುವ ಮೂಲಕ ಸಹಕಾರ ಚಳವಳಿಗೆ ಭದ್ರಬುನಾದಿಯನ್ನು ಹಾಕುವ ಜವಾಬ್ದಾರಿಯನ್ನು ಹೊಂದಬೇಕು ಎಂದು ತಿಳಿಸಿದರು.

ವಸ್ತು ಪ್ರದರ್ಶನ ಮಳಿಗೆ ಉದ್ಘಾಟಿಸಿದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಮಾತನಾಡುತ್ತಾ, ಸಹಕಾರ ಚಳವಳಿಯಲ್ಲಿ ಹೆಚ್ಚು ಜನರು ಭಾಗವಹಿಸುವ ಮೂಲಕ ಸಹಕಾರಿ ಕ್ಷೇತ್ರದ ಬೆಳವಣಿಗೆಗೆ ಪೂರಕ ವಾತಾವರಣ ನಿರ್ಮಾಣ ಮಾಡಬೇಕಾಗಿದೆ. ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಸಹಕಾರಿ ರಂಗಕ್ಕೆ ಹೆಚ್ಚಿನ ಒತ್ತು ನೀಡಲು ಸರ್ಕಾರ ಸಿದ್ದವಿದೆ. ಆದ್ದರಿಂದ ಸಹಕಾರಿ ಕ್ಷೇತ್ರದಲ್ಲಿ ಹೊಸ ಹೊಸ ಚಿಂತನೆಗಳು, ಪ್ರಯೋಗಗಳು ನಡೆದು ಹೆಚ್ಚಿನ ಜನರು ಈ ಚಳವಳಿಯಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಬಸನಗೌಡ ದದ್ದಲ್ ವಹಿಸಿದ್ದರು. ಮಹಾಮಂಡಳದ ನಿರ್ದೇಶಕರಾದ ಶೇಖರಗೌಡ ಮಾಲಿಪಾಟೀಲ್ ಸ್ವಾಗತಿಸಿದರು. ಕೆಓಎಫ್ ಅಧ್ಯಕ್ಷರಾದ ವೆಂಕಟರಾವ್ ನಾಡಗೌಡರವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹಕಾರ ಶಿಕ್ಷಣಾಧಿಕಾರಿ ಹಾಗೂ ಕಾರ್ಯಕ್ರಮದ ಸಮನ್ವಯಾಧಿಕಾರಿ ಶರಣಬಸಪ್ಪ ಕಾಟ್ರಳ್ಳಿ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಉತ್ತಮ ಸಾಧನೆ ಮಾಡಿದ ಸಹಕಾರ ಸಂಘಗಳಿಗೆ ಹಾಗೂ ಸಹಕಾರಿಗಳಿಗೆ ಸನ್ಮಾನಿಸಿ, ಗೌರವಿಸಲಾಯಿತು. ವೇದಿಕೆಯಲ್ಲಿ ಶಾಸಕರುಗಳಾದ ಹಂಪನಗೌಡಬಾದರ್ಲಿ, ಹಂಪಯ್ಯ ನಾಯಕ, ಬಸನಗೌಡ ದದ್ದಲ್, ಕರಿಯಮ್ಮ ನಾಯಕ ಚಿಂತಲಕುಂಟೆ, ವಿಧಾನಪರಿಷತ್ ಸದಸ್ಯರಾದ ಶರಣಗೌಡ ಬಯ್ಯಾಪುರ, ಮಹಾಂತೇಶ ಪಾಟೀಲ ಹತ್ತನೂರು, ವಿಶ್ವನಾಥ ಪಾಟೀಲ್ ತೋರಣದಿನ್ನೆ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ್, ಉಪಾಧ್ಯಕ್ಷ ಬಶೀರ್ ಉದ್ದೀನ್, ರಾಯಚೂರು ಜಿಲ್ಲಾ ಸಹಕಾರ ಯೂನಿಯನ್ನಿನ ಅಧ್ಯಕ್ಷರಾದ ವಿಜಯಕುಮಾರ್ ಪಾಟೀಲ್, ಪ್ರಾದೇಶಿಕ ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಸುರೇಶ್‌ರೆಡ್ಡಿ ಮಾದಿನೂರು, ಶಕುಂತಲಾ ಕೆ. ಬೆಲ್ದಾಳೆ, ಸಹಕಾರ ಸಂಘಗಳ ಅಪರ ನಿಬಂಧಕರಾದ ಹೆಚ್. ಬಾಲಶೇಖರ್, ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್, ಗ್ರಾಹಕರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಗುರುಸ್ವಾಮಿ, ಕೆಓಎಫ್ ವ್ಯವಸ್ಥಾಪಕ ನಿರ್ದೇಶಕರಾದ ಜಿ.ಸಿ. ರೆಡ್ಡಿ, ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಪುಂಡಲೀಕ ಎನ್. ಕೆರೂರು, ರಾಯಚೂರು ಡಿಸಿಸಿ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕರಾದ ಐ.ಎಸ್. ಗಿರೆಡ್ಡಿ ಹಾಗೂ ಇತರ ಸಹಕಾರಿಗಳು ಉಪಸ್ಥಿತರಿದ್ದರು.



## 70ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಉತ್ತರ ಕನ್ನಡ ಜಿಲ್ಲೆಯಲ್ಲಿ ಸಹಕಾರಿ ಕ್ಷೇತ್ರ ಬೃಹತ್ತಾಗಿ ಬೆಳೆದಿದೆ; ರೈತರ, ಅಧಿಕಾರಿಗಳ ಹಾಗೂ ಸಹಕಾರಿಗಳ ಅವಿರತ ಶ್ರಮ ಅಡಗಿದೆ – ಶಾಸಕ ಶಿವರಾಮ ಹೆಬ್ಬಾರ್



**ಶಿರಸಿ :** ಸಹಕಾರಿ ಕ್ಷೇತ್ರ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಬೆಳೆಯಲು ರೈತರು, ಧುರೀಣರು ಹಾಗೂ ಅಧಿಕಾರಿ ವರ್ಗದವರು ಕಾರಣ. ಸೌಲಭ್ಯಗಳಿಲ್ಲದ ಕಷ್ಟದ ದಿನಗಳಲ್ಲಿ ಸಹಕಾರಿ ಸಂಘಗಳನ್ನು ಕಟ್ಟಿ ಬೆಳೆಸಿದ ಮಹಾನ್ ಸಹಕಾರಿ ಧುರೀಣರು ನಮ್ಮ ಜಿಲ್ಲೆಯಲ್ಲಿದ್ದಾರೆ ಎಂದು ಕೆಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ ಶಾಸಕ ಶಿವರಾಮ ಹೆಬ್ಬಾರ ಹೇಳಿದರು.

ಅವರು ನಗರದ ಟಿಎಸ್ಎಸ್ ಆವರಣದಲ್ಲಿ ಏರ್ಪಡಿಸಿದ್ದ 70 ನೇ ಅಖಿಲ ಭಾರತ ಸಹಕಾರ ಸಪ್ತಾಹದ ರಾಜ್ಯಮಟ್ಟದ ಸಮಾರಂಭ ಉದ್ಘಾಟಿಸಿ, ಮಾತನಾಡಿದರು.

ರಾಜ್ಯ ಮಟ್ಟದ ಸಹಕಾರಿ ಕ್ಷೇತ್ರಕ್ಕೆ ಉತ್ತರ ಕನ್ನಡ ಜಿಲ್ಲೆ ಬಹುದೊಡ್ಡ ಕೊಡುಗೆ ನೀಡಿದೆ. ಸಹಕಾರಿ ರತ್ನ ಪ್ರಶಸ್ತಿಯನ್ನು ಅತೀ ಹೆಚ್ಚು ಪಡೆರುವ ಜಿಲ್ಲೆ ನಮ್ಮ ಉತ್ತರ ಕನ್ನಡ. ರೈತರನ್ನು ಬೆಳೆಸುವ ಉದ್ದೇಶದಿಂದಲೇ ಸಹಕಾರಿ ಕ್ಷೇತ್ರ ಸ್ಥಾಪನೆ ಮಾಡಲಾಗಿದೆ. ಸಹಕಾರಿ ಕ್ಷೇತ್ರ ಹಾಳಾದಾಗ ರೈತರ ಪರಿಸ್ಥಿತಿ ಸಹ ಹಾಳಾಗುತ್ತದೆ. ಇಡೀ ರಾಜ್ಯಕ್ಕೆ ನಮ್ಮ ಜಿಲ್ಲೆ ಮಾದರಿ ಜಿಲ್ಲೆಯನ್ನಾಗಿ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಟಿಎಸ್ಎಸ್ ಅಧ್ಯಕ್ಷ ಗೋಪಾಲಕೃಷ್ಣ ವೈದ್ಯ ಮಾತನಾಡಿ, ಸಹಕಾರಿ ಕ್ಷೇತ್ರದಲ್ಲಿ ಜಿಲ್ಲೆಯು ಮುಂಚೂಣಿಯಲ್ಲಿದ್ದು, ಈಗ ಕೆಲ ಕಾನೂನು ತೊಡಕುಗಳನ್ನು ಸಹಕಾರಿ ಸಂಘಗಳು ಎದುರಿಸಬೇಕಾಗಿದೆ. ಅದನ್ನು ನಿವಾರಿಸಿದರೆ ವಿವಿದೋದ್ದೇಶ ಸಂಘಗಳಿಗೆ ಬಹಳ ಅನುಕೂಲವಾಗುತ್ತದೆ ಎಂದ ಅವರು, ರಾಜ್ಯಮಟ್ಟದ ಸಹಕಾರಿ ಸಪ್ತಾಹ ಶಿರಸಿಯಲ್ಲಿ ಹಮ್ಮಿಕೊಂಡಿರುವುದಕ್ಕೆ ಸಹಕಾರಿ ಸಚಿವ ರಾಜಣ್ಣ ಮತ್ತು ರಾಜ್ಯ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಹಿರಿಯ ಸಹಕಾರಿಗಳಾದ ಆರ್.ಎಂ. ಹೆಗಡೆ, ಜಿ.ಟಿ.ಹೆಗಡ ತಟ್ಟೀಸರ, ಜಿ.ಎಂ. ಹೆಗಡೆ, ಆರ್.ಎನ್. ಹೆಗಡೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ನೂರು ವರ್ಷ ಪೂರೈಸಿದ ಜಿಲ್ಲೆಯ ಸೇವಾ ಸಹಕಾರಿ ಸಂಘಗಳನ್ನು ಗೌರವಿಸಲಾಯಿತು. ಕೆಡಿಸಿಸಿ ಬ್ಯಾಂಕ್‌ನಿಂದ ಪ್ರತಿ ವರ್ಷ ಕೊಡಮಾಡುವ ಜಿ.ಎಸ್ ಹೆಗಡೆ ಅಜ್ಜಿಬಳ ಪ್ರಶಸ್ತಿಯನ್ನು ಹಾಗೂ ಸುಂದರ ರಾವ್ ಪಂಡಿತ್ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಧಾರವಾಡ ಹಾಲು ಒಕ್ಕೂಟದ ಅಧ್ಯಕ್ಷ ಶಂಕರ ಮುಗುದ, ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಹಾಗೂ ಹಾವೇರಿ ಹಾಲು ಒಕ್ಕೂಟದ ಅಧ್ಯಕ್ಷ ಬಸವರಾಜ ಅರಬಗೋಡ, ಟಿಎಂಎಸ್ ಅಧ್ಯಕ್ಷ ಜಿ.ಎಂ. ಹೆಗಡೆ ಹುಳಗೋಳ, ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಬಿ.ಎನ್. ಭಟ್ ಅಳ್ಳಂಕಿ, ಸಹಕಾರ ಸಂಘಗಳ ಅಪರ ನಿಬಂಧಕ ಪ್ರಕಾಶ ರಾವ್, ರಾಜ್ಯ ಸಹಕಾರ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಸಂಯುಕ್ತ ನಿಬಂಧಕ ಸುರೇಶಗೌಡ ಪಾಟೀಲ್, ಧಾರವಾಡದ ಕೆ.ಐ.ಸಿ.ಎಂ. ಪ್ರಾಂಶುಪಾಲ ಡಿ.ಆರ್. ವೆಂಕಟರಾವ್, ಕೆಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಮೋಹನದಾಸ ನಾಯಕ, ಸಹಕಾರ ಸಂಘಗಳ ಉಪನಿಬಂಧಕ ಎಸ್.ಜಿ. ಮಂಜುನಾಥ ಸಿಂಗ್, ಕೆಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಆರ್.ಜಿ. ಭಾಗ್ವತ್ ಸೇರಿದಂತೆ ಬ್ಯಾಂಕ್‌ನ ನಿರ್ದೇಶಕರು, ಹಿರಿಯ ಸಹಕಾರಿಗಳು, ವಿವಿಧ ಸಹಕಾರಿ ಸಂಘದ ಪ್ರತಿನಿಧಿಗಳು ಉಪಸ್ಥಿತರಿದ್ದರು.

## 70ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಸಹಕಾರ ಕ್ಷೇತ್ರ ಜನಾಂದೋಲನವಾಗಲಿ- ಸಹಕಾರ ಸಚಿವ ಕೆ.ಎನ್. ರಾಜಣ್ಣ

### ಸಹಕಾರ ಕ್ಷೇತ್ರದಲ್ಲಿ ಮಹಿಳೆಯರು-ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು : ಸಹಕಾರ ಮಹಾಮಂಡಳದ ಅಧ್ಯಕ್ಷ ಶ್ರೀ ಜಿ.ಟಿ. ದೇವೇಗೌಡ



**ಬೆಂಗಳೂರು:** ಸಹಕಾರ ಆಂದೋಲನವು ಜನರ ಆಂದೋಲನವಾಗಬೇಕು. ಈ ಆಂದೋಲನದಲ್ಲಿ ಹೆಚ್ಚು ಹೆಚ್ಚು ಜನರು ತೊಡಗಿಕೊಳ್ಳುವ ಮೂಲಕ ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಸಹಕಾರ ಕ್ಷೇತ್ರ ಇಂದು ಹೆಮ್ಮರವಾಗಿ ಬೆಳೆಯುವ ಮೂಲಕ ದೇಶದ ಆರ್ಥಿಕತೆಗೆ ತನ್ನದೆ ಆದ ರೀತಿಯಲ್ಲಿ ಕೊಡುಗೆ ನೀಡುತ್ತಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ದಿನಾಂಕ 19/11/2023 ರಂದು ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ಕರ್ನಾಟಕ ರಾಜ್ಯ ಸಹಕಾರ ಮಹಿಳಾ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಮೀನುಗಾರರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಲ್ಯಾಂಪ್ಸ್ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಚಲನಚಿತ್ರ ಮತ್ತು ಲಲಿತಾಕಲಾ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಕುಕ್ಕಟ ಮಹಾಮಂಡಳ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಸಹಕಾರ ಇಲಾಖೆ ಹಾಗೂ ಎಲ್ಲಾ ರೀತಿಯ ಸಹಕಾರ ಸಂಘಗಳು ಸೌಹಾರ್ದ ಸಹಕಾರಿಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹದ ರಾಜ್ಯ ಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿದ ಅವರು ಮಾತನಾಡಿದರು.

ಈ ಬಾರಿಯ ಸಪ್ತಾಹದ ಮುಖ್ಯ ಉದ್ದೇಶವೇ 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಸಾಧನೆಯಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಮತ್ತು ಸುಸ್ಥಿರ ಅಭಿವೃದ್ಧಿ ಎಂಬುದಾಗಿದ್ದು, ಸಹಕಾರ ಆಂದೋಲನದ ಮೂಲಕ ಹಳ್ಳಿಗರು ಕೂಡ ಆರ್ಥಿಕವಾಗಿ ಸದೃಢರಾಗುತ್ತಿದ್ದಾರೆ. ಹಾಗೂ ದೇಶದ ಜಿಡಿಪಿಗೂ ಕೂಡ ಸಹಕಾರ ಕ್ಷೇತ್ರ ತನ್ನದೇ ಆದ ಕೊಡುಗೆ ನೀಡುತ್ತಿದೆ. ಹೀಗಾಗಿ ರಾಷ್ಟ್ರೀಯ ಆರ್ಥಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ







ಅಪಾರವಾಗಿದೆ ಎಂದರು.

ಸಹಕಾರ ವಲಯದಲ್ಲಿ ಮುಖ್ಯವಾಗಿ ಯುವಕರು ಮತ್ತು ಮಹಿಳೆಯರು ಸಕ್ರಿಯವಾಗಿ ಭಾಗಿಯಾಗಬೇಕು. ಎಲ್ಲರು ಸ್ವಾಭಿಮಾನದಿಂದ ಸಾಗಬೇಕು ಮತ್ತು ತಮ್ಮ ಮಕ್ಕಳಿಗೆ ಉತ್ತಮವಾದ ಶಿಕ್ಷಣ ನೀಡುವಂತಾಗಬೇಕು. ಆರ್ಥಿಕವಾಗಿ ಅಬಲರಾದವರಿಗೆ ಸಹಕಾರ ಕ್ಷೇತ್ರ ಸ್ಪಂದಿಸಬೇಕು ಹಾಗೂ ಸಹಕಾರ ಸಂಘದ ಗುರಿ ಮತ್ತು ಉದ್ದೇಶಗಳಿಗೆ ಅನುಗುಣವಾಗಿ ಕೆಲಸ ಮಾಡಬೇಕು ಎಂದರು. ಸಹಕಾರ ವಲಯದಿಂದ ಗ್ರಾಮೀಣ ಜನರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಿದೆ. ಹೈನುಗಾರಿಕೆಯು ಗ್ರಾಮೀಣ ಮಟ್ಟದ ಉದ್ಯಮವಾಗಿ ಬೆಳೆಯುತ್ತಿರುವುದು ಸಂತಸದ ಸಂಗತಿಯಾಗಿದೆ. ಕೃಷಿಗೆ ಸಂಬಂಧಿಸಿದಂತೆ ಹೈನುಗಾರಿಕೆಯಂತಹ ಕಸುಬುಗಳು ಅಭಿವೃದ್ಧಿಗೆ ಪ್ರೇರಕವಾಗುತ್ತವೆ ಎಂದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಟಿ. ದೇವೇಗೌಡರವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಭಾರತದ ಆರ್ಥಿಕತೆಗೆ ಸಹಕಾರ ಕ್ಷೇತ್ರ ಹೆಬ್ಬಾಗಿಲಾಗಿದೆ. ಗಾಂಧೀಜಿಯವರು ಕೂಡ ಸಹಕಾರ ಕ್ಷೇತ್ರದಿಂದ ರಾಮ ರಾಜ್ಯ ಎನ್ನುತ್ತಿದ್ದರು. ನಾನು ನಿನಗಾಗಿ, ನೀವು ಎಲ್ಲರಿಗಾಗಿ ಎಂಬ ತತ್ವದ ಅಡಿಯಲ್ಲಿ ಸಹಕಾರ ಕ್ಷೇತ್ರ ಇರಬೇಕು.

ಮಹಾಮಂಡಳ ಕಳೆದ 99 ವರ್ಷಗಳಿಂದ ಸಹಕಾರ ಚಳವಳಿಯ ಬೆಳವಣಿಗೆಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಮುಂದಿನ ದಿನಗಳಲ್ಲಿ ಸರ್ಕಾರದ ಮಾರ್ಗದರ್ಶನದಲ್ಲಿ ಹೆಚ್ಚು ಹೆಚ್ಚು ಚಳವಳಿಯ ಬೆಳವಣಿಗೆಗೆ ಪೂರಕವಾಗಿ ಕಾರ್ಯನಿರ್ವಹಿಸಲು ಸಿದ್ಧವಿದೆ. ಗ್ರಾಮೀಣ ಜನರಿಗೂ ಸಹಕಾರ ಶಿಕ್ಷಣ, ತರಬೇತಿ ದೊರೆಯಬೇಕು. ಪ್ರತಿಯೊಬ್ಬರು ಸಹಕಾರ ಶಿಕ್ಷಣ ತರಬೇತಿಯ ಲಾಭ ಪಡೆಯಬೇಕೆಂದರು. ಈ ನಿಟ್ಟಿನಲ್ಲಿ ಮಹಾಮಂಡಳದ ಕಾರ್ಯಯೋಜನೆಗಳನ್ನು ರೂಪಿಸುತ್ತೇವೆ. ಮಹಿಳೆಯರು ಮತ್ತು ಯುವಜನರು ಸಹಕಾರ ಕ್ಷೇತ್ರದಿಂದ ದೊರೆಯುವ ಪ್ರಯೋಜನೆಗಳ ಸದುಪಯೋಗ ಪಡೆಯಲು ಅವರು ಈ ಸಂದರ್ಭದಲ್ಲಿ ಸಲಹೆ ನೀಡಿದರು.

ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ ಅಧ್ಯಕ್ಷರಾದ ಎಲ್.ಬಿ.ಪಿ. ಭೀಮಾನಾಯ್ಕ ಅವರು ಸಹಕಾರ ಚಳವಳಿ ಇಂದು ಬೃಹದಾಕರವಾಗಿವಾಗಿ ಬೆಳೆವಣಿಗೆಯಾಗಿದ್ದು, ಯಾವ ಗ್ರಾಮದಲ್ಲಿ ಗುಡಿಗಳ ಗಂಟೆಗಳಿಗಿಂತ ಹೆಚ್ಚಾಗಿ ಶಾಲೆಗಳ ಗಂಟೆ ಶಬ್ಧ ಹೆಚ್ಚಾಗಿ ಕೇಳುತ್ತದೆಯೋ ಆ ಗ್ರಾಮ ಉದ್ಧಾರ ಆಗುತ್ತದೆ ಎಂದು ಅಂಬೇಡ್ಕರ್ ಅವರು ಹೇಳಿದ್ದರು. ಅದೇ ರೀತಿ ಪ್ರತಿ ಗ್ರಾಮ ಉದ್ಧಾರವಾಗಲು ಸಹಕಾರಿ ಸಂಘ ಕಾರಣವಾಗುತ್ತಿದೆ. ಇದರ ಪ್ರಯೋಜನವನ್ನು ಪ್ರತಿಯೊಬ್ಬರಿಗಾಗಿ ತಲುಪಿಸಲು ನಾವು ಸದಾ ಪ್ರಯತ್ನಿಸೋಣವೆಂದರು.

ಪ್ರಾಸ್ತವಿಕವಾಗಿ ಮಾತನಾಡಿದ ಅವರು ಕೆಎಂಎಫ್ ಪ್ರಸ್ತುತ 85 ಲಕ್ಷ ಲೀಟರ್‌ಗೆ ತಲುಪಿದೆ. ಜತೆಗೆ ಮೈಸೂರು ದಸರಾ ಸಂದರ್ಭದಲ್ಲಿ ಒಟ್ಟಾರೆ 400 ಮೆಟ್ರಿಕ್ ಟನ್ ಸಿಹಿ ತಿನಿಸುಗಳ ಜತೆಗೆ ರೈತರಿಗೆ ಪ್ರೋತ್ಸಾಹ ಧನ ಮಾರಾಟ ಮಾಡಿ ದಾಖಲೆ ಬರೆಯಲಾಗಿದೆ. ಸಹಕಾರ ಹೈನೋದ್ಯಮ ಗ್ರಾಮೀಣ ಜನರ ಬದುಕಿಗೆ ಆಸರೆಯಾಗಿದ್ದು, ಈ ನಿಟ್ಟಿನಲ್ಲಿ ಸಪ್ತಾಹವನ್ನು ಇಂದು ಅರ್ಥಪೂರ್ಣವಾಗಿ ಆಚರಿಸಲಾಗೊತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಕೆ.ಎಂ.ಎಫ್ ವ್ಯವಸ್ಥಾಪಕ ನಿರ್ದೇಶಕರಾದ ಜಗದೀಶ್ ಎಂ.ಕೆ. ಅವರು ಸ್ವಾಗತಿಸಿದರು. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ ಅವರು ವಂದಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಎ.ಸಿ. ನಾಗರಾಜ್, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಹೆಚ್.ಟಿ. ನಾಗೇಶ್, ಕರ್ನಾಟಕ ರಾಜ್ಯ ಸಹಕಾರ ಕುಕ್ಕಟ ಮಹಾಮಂಡಳದ ಅಧ್ಯಕ್ಷರಾದ ಡಿ.ಕೆ. ಕಾಂತರಾಜು, ಧಾರವಾಡ ಹಾಲು ಒಕ್ಕೂಟದ ಅಧ್ಯಕ್ಷರಾದ ಹೆಚ್.ಜಿ. ಹಿರೇಗೌಡ್ರ, ದಕ್ಷಿಣ ಕನ್ನಡ ಹಾಲು ಒಕ್ಕೂಟದ ಅಧ್ಯಕ್ಷರಾದ ಕಾಪು ದಿವಾಕರ ಶೆಟ್ಟಿ, ಸರ್ಕಾರದ ನಾಮನಿರ್ದೇಶಿತ ನಿರ್ದೇಶಕರಾದ ಕಾಂತರಾಜು ಎಂ.ಪಿ., ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್, ಸಹಕಾರ ಸಂಘಗಳ ಜಂಟಿ ನಿಬಂಧಕರಾದ ಅಶ್ವತ್ಥನಾರಾಯಣ, ರಾಜ್ಯ ಸಹಕಾರ ಮಹಾಮಂಡಳದ ಸಾರ್ವಜನಿಕ ಸಂಪರ್ಕಾಧಿಕಾರಿ ಕೇಶವ್ ಟಿ.ಎನ್. ಮತ್ತಿತರರು ಉಪಸ್ಥಿತರಿದ್ದರು.

## ಸಹಕಾರ ಕ್ಷೇತ್ರದ ಸಾಧಕರಿಗೆ ಸಹಕಾರ ರತ್ನ ಪ್ರಶಸ್ತಿ ಪ್ರದಾನ

ಸಹಕಾರ ಕ್ಷೇತ್ರದ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸಿರುವ ರಾಜ್ಯದ ವಿವಿಧ ಜಿಲ್ಲೆಯ ಸಹಕಾರಿ ಮುಖಂಡರುಗಳನ್ನು ಗುರುತಿಸಿ ಕರ್ನಾಟಕ ಸರ್ಕಾರವು ವಿಜಯಪುರದಲ್ಲಿ ನಡೆದ 70ನೇ ಅಖಿಲ ಭಾರತ ಸಹಕಾರ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ರಾಜ್ಯದ 74 ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿಯನ್ನು ಪ್ರದಾನ ಮಾಡಿದೆ. ಅವರುಗಳ ವಿವರ ಈ ಕೆಳಕಂಡಂತಿದೆ.

1. ವೈ.ವಿ. ಅಣ್ಣಯ್ಯ, ಅಧ್ಯಕ್ಷರು, ಬೆಂಗಳೂರು ಪೂರ್ವ ಮತ್ತು ದಕ್ಷಿಣ ತಾಲ್ಲೂಕು ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ.,
2. ಕೆ.ಸಿ. ಕೃಷ್ಣಪ್ಪ, ಅಧ್ಯಕ್ಷರು, ಶ್ರೀ ಕಾಳಿದಾಸ ಸಹಕಾರ ಬ್ಯಾಂಕ್ ನಿ., ಬೆಂಗಳೂರು.
3. ಶಿವರಾಮಯ್ಯ, ಅಧ್ಯಕ್ಷರು, ನಾಗಿನಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು
4. ಕೆ.ಎಸ್. ಚಾಮರಾಜು, ಉಪಾಧ್ಯಕ್ಷರು, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು.
5. ಡಿ.ಆರ್. ನಾಗೇಶಪ್ಪ, ಮಾಜಿ ಅಧ್ಯಕ್ಷರು, ಶ್ರೀ ಬನಶಂಕರಿ ಪತ್ತಿನ ಸಹಕಾರ ಸಂಘ ನಿ., ಬೆಂಗಳೂರು
6. ಎಂ.ಸಿ. ವೇಣುಗೋಪಾಲ್, ಅಧ್ಯಕ್ಷರು, ಶ್ರೀ ಯಶಸ್ವಿನಿ ಸೌಹಾರ್ದ ಪತ್ತಿನ ಸಹಕಾರಿ ಲಿ., ಬೆಂಗಳೂರು
7. ಟಿ.ಪಿ. ಯೋಗ, ನಿರ್ದೇಶಕರು, ಡಿ.ಸಿ.ಸಿ. ಬ್ಯಾಂಕ್ ನಿ., ಬೆಂಗಳೂರು
8. ರುದ್ರೇಗೌಡ ಬಿನ್ ಕಪನಿಗೌಡ, ನಿರ್ದೇಶಕರು, ದಿ. ಜನತಾ ಕೋ–ಆಪರೇಟಿವ್ ಬ್ಯಾಂಕ್ ನಿ., ಬೆಂಗಳೂರು.
9. ಡಾ. ಬಿ.ಎಂ. ಉಮೇಶ್ ಕುಮಾರ್, ಅಧ್ಯಕ್ಷರು, ಗ್ಲೋಬಲ್ ಸಿಟಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ನಿ., ಬೆಂಗಳೂರು.
10. ಎಂ.ಆರ್. ರಾಜಶೇಖರ್, ನಿರ್ದೇಶಕರು, ತ್ಯಾಗರಾಜ ಕೋ–ಆಪರೇಟಿವ್ ಬ್ಯಾಂಕ್ ನಿ., ಬೆಂಗಳೂರು.
11. ಜಿ. ಲಕ್ಷ್ಮೀನಾರಾಯಣ, ಅಧ್ಯಕ್ಷರು, ರೇಷ್ಮೆ ಬೆಳೆಗಾರರ ಹಾಗೂ ರೈತರ ಸೇವಾ ಸಹಕಾರ ಸಂಘ ನಿ, ನಲ್ಲೂರು, ಬಾಲೇಪುರ ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ.
12. ಚುಂಚೇಗೌಡ, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು
13. ಗಂಗಣ್ಣ, ನಿರ್ದೇಶಕರು, ನೆಲಮಂಗಲ ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್
14. ಎಸ್.ರವಿ, ಮಾಜಿ ಅಧ್ಯಕ್ಷರು, ಬೆಂಗಳೂರು ನಗರ, ಗ್ರಾಮಾಂತರ ಮತ್ತು ರಾಮನಗರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ಬೆಂಗಳೂರು.
15. ಎಂ.ಕೆ. ಮುರುಗಪ್ಪಗೌಡ, ಮಾಜಿ ಅಧ್ಯಕ್ಷರು, ತುಮಕೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ತುಮಕೂರು.
16. ಎಂ.ಎಸ್. ಮಲ್ಲಿಕಾರ್ಜುನಯ್ಯ, ಅಧ್ಯಕ್ಷರು, ಟಿ.ಎ.ಪಿ.ಸಿ.ಎಂ.ಎಸ್. ಮಧುಗಿರಿ, ತುಮಕೂರು.
17. ಬಿ.ಜಿ. ಕೃಷ್ಣಪ್ಪ, ಮಾಜಿ ಅಧ್ಯಕ್ಷರು, ತುಮಕೂರು ವಾಲ್ಮೀಕಿ ಸಹಕಾರ ಸಂಘ ನಿ., ತುಮಕೂರು.
18. ಎನ್. ಗಂಗಣ್ಣ, ಮಾಜಿ ಅಧ್ಯಕ್ಷರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು.
19. ಟಿ.ಎನ್. ನರಸಿಂಹಯ್ಯ, ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ತುಮಕೂರು
20. ಬಿ. ಶಿವಣ್ಣ, ನಿರ್ದೇಶಕರು ತುಮಕೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ತುಮಕೂರು.
21. ಹೆಚ್.ಆರ್. ಶಾಲಿನಿ, ನಿರ್ದೇಶಕರು, ಭುವನೇಶ್ವರಿ ಮಹಿಳಾ ಪತ್ತಿನ ಸಹಕಾರ ಸಂಘ, ಚಿಕ್ಕಪೇಟೆ ತುಮಕೂರು.
22. ಕೆ.ವೈ. ನಂಜೇಗೌಡ, ಮಾನ್ಯ ಶಾಸಕರು ಹಾಗೂ ಅಧ್ಯಕ್ಷರು, ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಕೋಲಾರ.
23. ಜಿ.ಈ. ಅಜ್ಜಪ್ಪ, ನಿರ್ದೇಶಕರು, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿ., ಚಿತ್ರದುರ್ಗ.
24. ಎಂ. ಹರನಾಥರಾವ್ ಮತ್ತಿಕೊಪ್ಪ, ಅಧ್ಯಕ್ಷರು, ಕೃಷಿಕರ ವಿವಿಧೋದ್ದೇಶ ಮಾರಾಟ ಸಹಕಾರ ಸಂಘ ಸಾಗರ
25. ಆರ್.ಜಿ. ಶ್ರೀನಿವಾಸಮೂರ್ತಿ, ಅಧ್ಯಕ್ಷರು, ಶ್ರೀ ಕನ್ನಿಕಾಪರಮೇಶ್ವರಿ ಕೋ–ಆಪರೇಟಿವ್ ಬ್ಯಾಂಕ್ ನಿ., ದಾವಣಗೆರೆ.
26. ನಿರಂಜನ್ ಮೂರ್ತಿ ಎನ್.ಎಂ. (ನಿರಂಜನ್ ನಿಶಾನಿ ಮಠ)
27. ಮರಳೂರು ಹನುಮಂತರೆಡ್ಡಿ, ನಿರ್ದೇಶಕರು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ಕೋಲಾರ.
28. ಬಿ.ಎಸ್. ರಫೀಉಲ್ಲಾ, ಅಧ್ಯಕ್ಷರು, ಕೌಸರ್ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘ ನಿ., ಚಿಕ್ಕಬಳ್ಳಾಪುರ.
29. ಬಿ. ರಾಜೇಗೌಡ ಬಿನ್ ಲೇ: ಬೋರೇಗೌಡ, ತುರುಬನಹಳ್ಳಿ, ಬಿಂಡಿಗನವಿಲೆ ಹೋಬಳಿ, ನಾಗಮಂಗಲ.
30. ಬಿ. ಬೋರೇಗೌಡ, ಎಂ.ಶೆಟ್ಟಹಳ್ಳಿ ಗ್ರಾಮ, ಕೆ.ಶೆಟ್ಟಿಹಳ್ಳಿ ಹೋಬಳಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ
31. ಹೆಚ್.ಟಿ. ಕೃಷ್ಣೇಗೌಡ, ಮಾಜಿ ಅಧ್ಯಕ್ಷರು, ಟಿ.ಎ.ಪಿ.ಸಿ.ಎಂ.ಎಸ್. ನಾಗಮಂಗಲ, ಮಂಡ್ಯ
32. ಕೆ.ಎಲ್. ಶಿವರಾಮು, ಮಾಜಿ ಅಧ್ಯಕ್ಷರು, ಸ್ಫೂರ್ತಿ ಪತ್ತಿನ ಸಹಕಾರ ಸಂಘ ನಿ., ಭಾರತೀನಗರ, ಮಂಡ್ಯ.
33. ಜೆ.ಪಿ. ರಾಜು, ಮಾಜಿ ನಿರ್ದೇಶಕರು, ಕರ್ನಾಟಕ ರಾಜ್ಯ ಲ್ಯಾಂಪ್ಸ್ ಮಹಾಮಂಡಳ ನಿ., ಮೈಸೂರು.
34. ಕೆ.ಎಂ. ಸೋಮಯ್ಯ, ಮಾಜಿ ನಿರ್ದೇಶಕರು, ಕೊಡಗು ಜಿಲ್ಲಾ

ಸಹಕಾರ ಕೇಂದ್ರ ಬ್ಯಾಂಕ್ ನಿ., ಕೊಡಗು.

35. ಹೆಚ್.ಪಿ. ಮೋಹನ್, ಮಾಜಿ ಅಧ್ಯಕ್ಷರು, ಹಾಸನ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ಹಾಸನ
36. ಯಶವಂತ್ ಹಾಸನ, ಅಧ್ಯಕ್ಷರು, ಹಾಸನ ಸಿಟಿ ಕೋ–ಆಪರೇಟಿವ್ ಬ್ಯಾಂಕ್ ನಿ., ಹಾಸನ.
37. ಓ.ಎಸ್. ಗೋಪಾಲಗೌಡ, ಮಾಜಿ ಅಧ್ಯಕ್ಷರು, ಮೂಡಿಗೆರೆ ಪಿ.ಸಿ.ಎ.ಆರ್.ಡಿ. ಬ್ಯಾಂಕ್ ನಿ., ಚಿಕ್ಕಮಗಳೂರು.
38. ಬಿ. ನೀ. ವಿಶ್ವನಾಥ್ ತಂದೆ ನೀಲಕಂಠೇಗೌಡ, ಶಿರವಾಸೆ, ಚಿಕ್ಕಮಗಳೂರು
39. ಬಿ. ನಿರಂಜನ್, ಅಧ್ಯಕ್ಷರು, ತಣ್ಣೀರು ಪಂತ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿ., ಬೆಳ್ತಂಗಡಿ ತಾಲೂಕು, ದಕ್ಷಿಣ ಕನ್ನಡ ಜಿಲ್ಲೆ.
40. ಮೋನಪ್ಪ ಶೆಟ್ಟಿ ಎಕ್ಕಾರು, ಅಧ್ಯಕ್ಷರು, ಮಂಗಳೂರು ತಾಲ್ಲೂಕು ಕೃಷಿ ಉತ್ಪನ್ನ ಸಹಕಾರಿ ಮಾರಾಟ ಸಂಘ ನಿಯಮಿತ ಕೂಳೂರು.
41. ಅನಿಲ್ ಲೋಬೋ, ಅಧ್ಯಕ್ಷರು, ದಿ ಮಂಗಳೂರು ಕ್ಯಾಥೋಲಿಕ್ ಸಹಕಾರ ಬ್ಯಾಂಕ್ ನಿ., ಹಂಪನಕಟ್ಟೆ, ಮಂಗಳೂರು.
42. ಉಮೇಶ್ ಟಿ. ಕರ್ಕೇರ, ಅಧ್ಯಕ್ಷರು, ಯಾಂತ್ರಿಕ ಮೀನುಗಾರರ ಪ್ರಾಥಮಿಕ ಸಹಕಾರ ಸಂಘ ನಿ., ಮಂಗಳೂರು.
43. ಎ. ಸುರೇಶ್ ರೈ, ಅಧ್ಯಕ್ಷರು, ಓಡಿಯೂರು ಶ್ರೀ ವಿವಿದೋದ್ದೇಶ ಸೌಹಾರ್ದ ಸಹಕಾರಿ ಮಂಗಳೂರು.
44. ಕಾಪು ದಿವಾಕರ ಶೆಟ್ಟಿ, ನಿರ್ದೇಶಕರು ಕರ್ನಾಟಕ ರಾಜ್ಯ ಸಹಕಾರ ಹಾಲು ಮಹಾಮಂಡಳ ನಿ., ಬೆಂಗಳೂರು (ದಕ್ಷಿಣ ಕನ್ನಡ)
45. ಎನ್. ಮಲ್ಲೇಶ್, ಮಾಜಿ ಅಧ್ಯಕ್ಷರು, ಪೀಕಾರ್ಡ್ ಬ್ಯಾಂಕ್ ನಿ., ಚಾಮರಾಜನಗರ.
46. ಆರ್. ನರೇಂದ್ರ, ಶಾಸಕರು, ಮಾಜಿ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು.
47. ಉತ್ತಮ್ ರಾವುಸಾಹೇಬ್ ಪಾಟೀಲ್, ನಿರ್ದೇಶಕರು, ರಾಷ್ಟ್ರೀಯ ನೂಲಿನ ಗಿರಣಿಗಳ ಮಹಾಮಂಡಳ ನಿ., ಮುಂಬೈ.
48. ರವೀಂದ್ರ ಭೂ. ಯಲಿಗಾರ, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿ., ಬೆಂಗಳೂರು.
49. ಡಾ॥ ಕೃಷ್ಣಗೌಡ ಪಾಟೀಲ, ಅಧ್ಯಕ್ಷರು, ಗೋಕಾಕ ರೆಡ್ಡಿ ಕೋ–ಆಪ್ ಬ್ಯಾಂಕ್ ಬೆಳಗಾವಿ ಜಿಲ್ಲೆ.
50. ಬಸವನಗೌಡ ಶಿವನಗೌಡ ಕುರಹಟ್ಟಿ, ಅಧ್ಯಕ್ಷರು, ನವಲಗುಂದ ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ ನಿ., ಅಣ್ಣಿಗೇರಿ, ಧಾರವಾಡ.
51. ರವೀಂದ್ರ ಕುಡವಕ್ಕಲಿಗೇರ, ಮಾಜಿ ಅಧ್ಯಕ್ಷರು, ಪೀಕಾರ್ಡ್ ಬ್ಯಾಂಕ್ ನಿ., ಶಿಗ್ಗಾಂವ.
52. ಹನುಮಂತಗೌಡ ಬಸನಗೌಡ ಭರಮಣ್ಣನವರ, ಸಂಚಾಲಕರು ಜಿಲ್ಲಾ ಸಹಕಾರ ಯೂನಿಯನ್ ನಿ., ಹಾವೇರಿ
53. ಗುರುರಾಜ ವಾದಿರಾಜ ಬಳಗಾನೂರ, ಮಾಜಿ ಅಧ್ಯಕ್ಷರು, ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಗದಗ
54. ವಿನೋದ ಬೊಮ್ಮಯ್ಯ ನಾಯಕ, ಉತ್ತರಕನ್ನಡ ಜಿಲ್ಲೆ,
55. ಎನ್.ಪಿ. ಗಾಂವಕರ್, ನಿವೃತ್ತ ವ್ಯವಸ್ಥಾಪಕ ನಿರ್ದೇಶಕರು, ಮತ್ತು ನಿರ್ದೇಶಕರು ಕೆ.ಡಿ.ಸಿ.ಸಿ. ಬ್ಯಾಂಕ್ ನಿ., ಶಿರಸಿ.
56. ರವೀಂದ್ರ ಕಲಬುರ್ಗಿ, ಬಿನ್ ಪ್ರಲ್ಹಾದ, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ
57. ಧರೆಪ್ಪಾ ಮಹಾದೇವ ಆಲಗೂರ, ಅಧ್ಯಕ್ಷರು, ಶ್ರೀ ಪಾರ್ಶ್ವನಾಥ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘ ನಿ., ಜಮಖಂಡಿ, ಬಾಗಲಕೋಟೆ
58. ಜೆ. ಕೊಟ್ರೇಶಿ, ಸಹಕಾರ ಸಂಘಗಳ ಜಂಟಿ ನಿಬಂಧಕರು (ನಿವೃತ್ತ), ವಿಜಯಪುರ.
59. ಅರವಿಂದ ಭೋಗಣ್ಣಾ ಹೂಗಾರ, ನಿರ್ದೇಶಕರು, ಸರಕಾರಿ ನೌಕರರ ಸಹಕಾರಿ ಬ್ಯಾಂಕ್ ನಿ., ವಿಜಯಪುರ.
60. ಆಲಂಖಾನ್ ಚಿಂಚೋಳಿ, ಮಾಜಿ ಅಧ್ಯಕ್ಷರು, ಜನತಾ ಬಜಾರ್, ಕಲಬುರಗಿ
61. ಎಂ. ನಾರಾಯಣ ತಂ ಬಾಲಪ್ಪ ಶಹಾಪೂರ, ಉಪಾಧ್ಯಕ್ಷರು, ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ., ಯಾದಗಿರಿ
62. ಪಂಡಿತರಾವ್‌ಚಿದ್ರಿ, ನಿರ್ದೇಶಕರು, ಕರ್ನಾಟಕ ಸಹಕಾರ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಸಂಘಗಳ ಮಹಾಮಂಡಳ
63. ಎಸ್. ವಿಜಯಕುಮಾರ ಪಾಟೀಲ, ಅಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್ ನಿ., ರಾಯಚೂರು.
64. ಕೆ. ಅಮರೇಶ ಪಾಟೀಲ್, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳ ನಿ., ಬೆಂಗಳೂರು.
65. ಕೆ. ವೆಂಕಟಸ್ವಾಮಿ, ನಿರ್ದೇಶಕರು ಬಳ್ಳಾರಿ ಕೇಂದ್ರ ಸಹಕಾರ ಸಗಟು ಮಾರಾಟ ಸಹಕಾರ ಸಂಘ ನಿ., ಬಳ್ಳಾರಿ
66. ಜಿ. ಮಾಧವರಾವ್ (ಗರಾಸೆ ಮಾಧವರಾವ್), ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮೀನುಗಾರರ ಸಹಕಾರ ಮಹಾಮಂಡಳ ನಿ., ಮೈಸೂರು.
67. ಜೆ.ಎಂ. ಶಿವಪ್ರಸಾದ್, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು.
68. ಡಾ. ನೇಕಾರ ವಿರುಪಾಕ್ಷಪ್ಪ, ನಿರ್ದೇಶಕರು, ಕರ್ನಾಟಕ ರಾಜ್ಯ ಕೋ–ಆಪ್ ಹ್ಯಾಂಡ್ ಲೂಮ್ ವೀವರ್ಸ್ ಫೆಡರೇಷನ್ ನಿ., ಬೆಂಗಳೂರು (ಕಾವೇರಿ ಹ್ಯಾಂಡ್ ಲೂಮ್) (ಬಳ್ಳಾರಿ)
69. ಕೆ. ಬಸವರಾಜ ಹಿಟ್ನಾಳ, ನಿರ್ದೇಶಕರು, ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ರಾಯಚೂರು.
70. ಅಮರೇಶ ರಾಮಣ್ಣ ಉಪಲಾಪೂರ, ನಿರ್ದೇಶಕರು, ಕೊಪ್ಪಳ ಜಿಲ್ಲಾ ಸಹಕಾರ ಯೂನಿಯನ್.
71. ಕೆ.ಎಂ. ನಾಗರಾಜು, ನಿವೃತ್ತ ಸಹಕಾರ ಸಂಘಗಳ ಅಪರ ನಿಬಂಧಕರು
72. ಹೆಚ್.ಎಸ್. ನಾಗರಾಜಯ್ಯ, ನಿವೃತ್ತ ಸಹಕಾರ ಸಂಘಗಳ ಅಪರ ನಿಬಂಧಕರು
73. ರಮಣರೆಡ್ಡಿ, ನಿವೃತ್ತ ಸಹಕಾರ ಸಂಘಗಳ ಅಪರ ನಿಬಂಧಕರು